ಹುಬ್ಬಳ್ಳಿ-ಧಾರವಾಡ, ಗದಗ, ಬಾಗಲಕೋಟೆ, ವಿಜಯಪುರ, ಕೊಪ್ಪಳ, ವಿಜಯನಗರ, ಬೆಳಗಾವಿ, ದಾವಣಗೆರೆ, ರಾಯಚೂರ, ಯಾದಗಿರಿ

ಪಬ್ಲಿಕ್ ಫಾಸ್ಟ್ 31

PUBLIC FAST

ಕನ್ನಡ ದಿನಪತ್ರಿಕೆ

ಧ್ವನಿ ನಿಮ್ಮದು ಸಹಾಯ ನಮ್ಮದು... DAILY NEWS PAPER

E-mail : publicfast31@gmail.com

ಸಂಪಾದಕರು : ಐಶ್ವರ್ಯ ಪಿ. ಉಪ ಸಂಪಾದಕರು : ಇಮ್ರಾನ್ ಹೆಬ್ಬಳ್ಳಿ

• ಸಂಪುಟ : 01 • ಸಂಚಿಕೆ : 126 • ದಿನಾಂಕ : 26-09-2026 ಶನಿವಾರ KNKAN/26/A2600 ಪುಟ : 4 ಬೆಲೆ : ರೂ. 2 Mobile : 9916890865

ಸಿಇಸಿ ವಿರುದ್ಧ ಸುಪ್ರೀಂನಲ್ಲಿ ಅರ್ಜಿ

ನವದೆಹಲಿ : ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ವಿರುದ್ಧ ಕೇಳಿ ಬಂದಿರುವ ಆರೋಪಗಳ ಬಗ್ಗೆ ತನಿಖೆ ನಡೆಸಿ ಕಾನೂನು ಕ್ರಮಕ್ಕೆ ಕೋರಿ ಸುಪ್ರೀಂ ಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ.

ವಿಶೇಷ ತೀವ್ರ ಪರಿಷ್ಕರಣೆ ಸೇರಿದಂತೆ ಮತದಾರರ ಪಟ್ಟಿಗೆ ಸಂಬಂಧಿಸಿದ ಹಲವು ನಿರ್ಧಾರಗಳನ್ನು ಇತರ ಇಬ್ಬರು ಚುನಾವಣಾ ಆಯುಕ್ತರ ಸಮ್ಮತಿಯಿಲ್ಲದೆ ಏಕಪಕ್ಷೀಯವಾಗಿ ಕೈಗೊಳ್ಳಲಾಗಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸಿಇಸಿ ವಿರುದ್ಧ ಕಾನೂನು ಕ್ರಮ ಹಾಗೂ ಸ್ವತಂತ್ರ ತನಿಖೆ ನಡೆಸುವಂತೆ ಮನವಿ ಮಾಡಲಾಗಿದೆ.

ಮತದಾರರ ನೋಂದಣಿಗೆ ಬಳಸುವ ಫಾರಂ6ರಲ್ಲಿ ಮಾಡಲಾದ ಬದಲಾವಣೆ, ಚುನಾವಣಾ ಪಟ್ಟಿಯ ದತ್ತಾಂಶವನ್ನು ಕೇಂದ್ರೀಕರಿಸುವ ಕ್ರಮ ಹಾಗೂ ಎಸ್‌ಐಆರ್‌ಗೆ ಸಂಬಂಧಿಸಿದ ನಿರ್ಧಾರಗಳನ್ನು ಅರ್ಜಿಯಲ್ಲಿ ಪ್ರಮುಖವಾಗಿ ಪ್ರಶ್ನಿಸಲಾಗಿದೆ.

ಈ ಕ್ರಮಗಳಿಂದ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯುವ ಪರಿಸ್ಥಿತಿ ಉಂಟಾಗಿದೆ ಎಂದು ಅರ್ಜಿದಾರರು ದೂರಿದ್ದಾರೆ.

ಅರ್ಜಿಯಲ್ಲಿ, ಜನಪ್ರತಿನಿಧಿ ಕಾಯ್ದೆಯ ಸೆಕ್ಷನ್ 32 ಅಡಿಯಲ್ಲಿ ಸಿಇಸಿ ಜ್ಞಾನೇಶ್ ಕುಮಾರ್ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ. ಜೊತೆಗೆ, ಸಿಇಸಿ ಅವರ ಸಮ್ಮತಿಯೊಂದಿಗೆ ನಡೆದಿರುವುದಾಗಿ ಆರೋಪಿಸಲಾಗಿರುವ ನಿರ್ಧಾರಗಳನ್ನು ಪರಿಶೀಲಿಸಿ, ಅಗತ್ಯವಿದ್ದರೆ ಅವುಗಳನ್ನು ರದ್ದುಗೊಳಿಸುವಂತೆಯೂ ಮನವಿ ಮಾಡಲಾಗಿದೆ.

ಫಾರಂ6 ಬದಲಾವಣೆ ವಿವಾದ

ಹೊಸ ಮತದಾರರ ನೋಂದಣಿಗಾಗಿ ಬಳಸುವ ಫಾರಂ6ರಲ್ಲಿ ಈ ವರ್ಷ ಜುಲೈನಲ್ಲಿ ಹೊಸ ಪ್ರಶ್ನೆಯೊಂದನ್ನು ಸೇರಿಸಲಾಗಿತ್ತು.ಅರ್ಜಿದಾರರುಅಥವಾಅವರಪೋಷಕರು/ಅಜ್ಜ-ಅಜ್ಜಿಯರ ಹೆಸರು ಹಿಂದಿನ ಖಖಖ ಮತದಾರರ ಪಟ್ಟಿಯಲ್ಲಿ ಇದೆಯೇ ಎಂಬ ಮಾಹಿತಿಯನ್ನು ಕೇಳಲಾಗಿತ್ತು. ಈ ಪ್ರಶ್ನೆಗೆ ಉತ್ತರಿಸದೆ ಅರ್ಜಿ ಮುಂದುವರಿಸಲು ಸಾಧ್ಯವಾಗದ ರೀತಿಯಲ್ಲಿ ವ್ಯವಸ್ಥೆ ರೂಪಿಸಲಾಗಿತ್ತು ಎಂದು



ವರದಿಯಾಗಿದೆ.

ಈ ಬದಲಾವಣೆಗೆ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್‌ಸಂಧುಮತ್ತುವಿವೇಕ್‌ಜೋಶಿಆಕ್ಷೇಪವ್ಯಕ್ತಪಡಿಸಿದ್ದರು. ನಿಯಮ ಬದಲಿಸದೆ ಫಾರಂ6ರಲ್ಲಿ ಇಂತಹ ಬದಲಾವಣೆ ಮಾಡಲು ಸಾಧ್ಯವಿಲ್ಲ ಎಂದು ಅವರು ಆಂತರಿಕವಾಗಿ ಪ್ರಶ್ನಿಸಿದ್ದರು. ಸಂಧು ಅವರು ಬಳಿಕ ಈ ಬದಲಾವಣೆಯನ್ನು 'ಅಧಿಕೃತವಲ್ಲ' ಮತ್ತು 'ಕಾನೂನುಬಾಹಿರ' ಎಂದು ಆಕ್ಷೇಪಿಸಿ ಅದನ್ನು ತಕ್ಷಣ ತೆಗೆದುಹಾಕಬೇಕು ಎಂದು ದಾಖಲಿಸಿದ್ದರು.

ಚುನಾವಣಾ ಆಯೋಗದ ಒಳಗಿನ ಭಿನ್ನಾಭಿಪ್ರಾಯಕ್ಕೆ ಸಂಬಂಧಿಸಿದಂತೆ ದಿ ಇಂಡಿಯನ್ ಎಕ್ಸ್‌ಪ್ರೆಸ್ ನಡೆಸಿದ ತನಿಖಾ ವರದಿಯ ಪ್ರಕಾರ, ಕಳೆದ 10 ತಿಂಗಳಲ್ಲಿ ಚುನಾವಣಾ ಆಯುಕ್ತರಾದ ಸಂಧು ಮತ್ತು ಜೋಶಿ ಅವರು ಮತದಾರರ ಪಟ್ಟಿಗೆ ಸಂಬಂಧಿಸಿದ ನಿರ್ಧಾರಗಳು ಹಾಗೂ ಆದೇಶಗಳ ಕುರಿತು ಕನಿಷ್ಠ 14 ಬಾರಿ ಲಿಖಿತ ಆಕ್ಷೇಪ ದಾಖಲಿಸಿದ್ದರು.

ಹೊಸ ಮತದಾರರ ಸೇರ್ಪಡೆ, ಮತದಾರರ ಹೆಸರು ಅಳಿಸುವುದು ಮತ್ತು ಮರುಸ್ಥಾಪಿಸುವುದು, ಫಾರಂ- 6 ಬದಲಾವಣೆ ಹಾಗೂ ಚುನಾವಣಾ ಪಟ್ಟಿಯ ದತ್ತಾಂಶದ ನಿರ್ವಹಣೆ ಸೇರಿದಂತೆ ಹಲವು ವಿಷಯಗಳಲ್ಲಿ ಆಕ್ಷೇಪ ವ್ಯಕ್ತವಾಗಿತ್ತು.

ಮತದಾರರ ಪಟ್ಟಿಯ ದತ್ತಾಂಶವನ್ನು ಕ್ರಮೇಣ ಕೇಂದ್ರೀಕರಿಸಲಾಗುತ್ತಿದೆ ಎಂಬುದರ ಬಗ್ಗೆಯೂ ಇಬ್ಬರು ಆಯುಕ್ತರು ಕಳವಳ ವ್ಯಕ್ತಪಡಿಸಿದ್ದರು. ರಾಜ್ಯ ಮಟ್ಟದ ಚುನಾವಣಾಅಧಿಕಾರಿಗಳಿಗೆಚುನಾವಣಾದತ್ತಾಂಶವ್ಯವಸ್ಥೆಗೆ ಸಂಪೂರ್ಣ ಪ್ರವೇಶ ಸಿಗುತ್ತಿಲ್ಲ ಎಂಬ ಪ್ರಶ್ನೆಯನ್ನೂ ಸಂಧು ಎತ್ತಿದ್ದರು. ಮತ್ತೊಂದೆಡೆ, ಜೋಶಿ ಅವರು ಮತದಾರರ ದತ್ತಾಂಶಕ್ಕೆ ಸಂಬಂಧಿಸಿದ ಪ್ರವೇಶ ಮತ್ತು ಬದಲಾವಣೆಗಳ ಕುರಿತು ಪರಿಶೀಲನೆ ನಡೆಸುವ ಅಗತ್ಯವಿದೆ ಎಂದು ಸೂಚಿಸಿದ್ದರು.

2023ರ ಮುಖ್ಯ ಚುನಾವಣಾ ಆಯುಕ್ತರು ಮತ್ತು ಇತರ ಚುನಾವಣಾ ಆಯುಕ್ತರ (ನೇಮಕ, ಸೇವಾ ಷರತ್ತುಗಳು ಮತ್ತು ಅವಧಿ) ಕಾಯ್ದೆಯ ಸೆಕ್ಷನ್ 18 ಪ್ರಕಾರ, ಚುನಾವಣಾ ಆಯೋಗದ ಕಾರ್ಯಗಳನ್ನು ಸಾಧ್ಯವಾದಷ್ಟು ಸರ್ವಾನುಮತದಿಂದ ನಡೆಸಬೇಕು. ಆಯುಕ್ತರ ನಡುವೆ ಭಿನ್ನಾಭಿಪ್ರಾಯ ಉಂಟಾದರೆ ಬಹುಮತದ ಅಭಿಪ್ರಾಯದಂತೆ ನಿರ್ಧಾರ ಕೈಗೊಳ್ಳಬೇಕು.

ಈ ಹಿನ್ನೆಲೆಯಲ್ಲಿ ಸಿಇಸಿ ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದ್ದಾರೆ ಎಂಬ ಆರೋಪಗಳನ್ನು ಅರ್ಜಿಯಲ್ಲಿ ಪ್ರಶ್ನಿಸಲಾಗಿದೆ. ಆದರೆ ಚುನಾವಣಾ ಆಯೋಗವು ಆಂತರಿಕ ಚರ್ಚೆಗಳಲ್ಲಿ ಭಿನ್ನಾಭಿಪ್ರಾಯಗಳು, ಲಿಖಿತ ಅಭಿಪ್ರಾಯಗಳು ಮತ್ತು ಆಕ್ಷೇಪಗಳು ಸಹಜವಾಗಿದ್ದು, ಅಂತಿಮ ನಿರ್ಧಾರಗಳನ್ನು ಆಯೋಗವು ಸರ್ವಾನುಮತದಿಂದಲೇ ಕೈಗೊಂಡಿದೆ ಎಂದು ಸ್ಪಷ್ಟಪಡಿಸಿದೆ.

ಬಿಹಾರದಲ್ಲಿ 2025ರ ಜೂನ್‌ನಲ್ಲಿ ಆರಂಭವಾದ ಪ್ರಕ್ರಿಯೆ ಬಳಿಕ ದೇಶದ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ ನಡೆದಿದೆ. ಈ ಪ್ರಕ್ರಿಯೆಯಲ್ಲಿ ಕೋಟ್ಯಂತರ ಹೆಸರುಗಳ ಕುರಿತು ಪರಿಶೀಲನೆ, ಸೇರ್ಪಡೆ, ಅಳಿಸುವಿಕೆ ಮತ್ತು ಮರುಸ್ಥಾಪನೆಗೆ ಸಂಬಂಧಿಸಿದ ವಿವಾದಗಳು ಉಂಟಾಗಿವೆ. ಈ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ರಾಜಕೀಯ ಪಕ್ಷಗಳಲ್ಲೂ ತೀವ್ರ ಚರ್ಚೆ ನಡೆಯುತ್ತಿದೆ.

ಜ್ಞಾನೇಶ್ ರಾಜೀನಾಮೆಗೆ ಆಗ್ರಹಿಸಿ ಇಂದು ರಾಜ್ಯಾದ್ಯಂತ ಕೈ ಪ್ರತಿಭಟನೆ

ಬೆಂಗಳೂರು : ಕೇಂದ್ರ ಚುನಾವಣಾ ಆಯೋಗದ ಮುಖ್ಯ ಆಯುಕ್ತ ಜ್ಞಾನೇಶ್‌ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಪಕ್ಷ ನಾಳೆ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಿದೆ.

ಕೆಪಿಸಿಸಿ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು, ಕೇಂದ್ರ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಅವರನ್ನು ತಕ್ಷಣ ಬಂಧಿಸಿ ಅವರ ರಾಜೀನಾಮೆ ಪಡೆಯಬೇಕು. ಹಾಗೆಯೇ ಚುನಾವಣಾ ಆಯೋಗ ನಡೆಸಿರುವ ಎಲ್ಲ ಎಸ್‌ಐಆರ್ ಪ್ರತಿ ರದ್ದುಗೊಳಿಸಬೇಕು ಎಂದು ಆಗ್ರಹಿಸಿದರು.

ಕೇಂದ್ರ ಚುನಾವಣಾ ಆಯೋಗದ ಮುಖ್ಯ ಆಯುಕ್ತ ಜ್ಞಾನೇಶ್ ರಾಜೀನಾಮೆ ನೀಡುವವರೆಗೂ ಕಾಂಗ್ರೆಸ್ ಹೋರಾಟ ನಡೆಸಲಿದೆ. ನಾಳೆ ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ಪ್ರತಿಭಟನೆ ನಡೆಯಲಿದ್ದು, ಜತೆಗೆ ಎಲ್ಲ ಜಿಲ್ಲೆಗಳಲ್ಲೂ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಪ್ರತಿಭಟನೆ ನಡೆಸಲಿದ್ದಾರೆ ಎಂದರು.

ಕೇಂದ್ರ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್, ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಇವರೆಲ್ಲಾ ದೇಶ ದ್ರೋಹಿಗಳು ಎಂದು ಆರೋಪಿಸಿದ ಅವರು, ಇವರ್ಯಾರು ಕ್ಷಮೆಗೆ ಅರ್ಹರಲ್ಲ ಎಂದು ಹೇಳಿದರು.

ಪ್ರಧಾನಿ ಮೋದಿ, ಅಮಿತ್ ಶಾ ಇವರೆಲ್ಲಾ ಕ್ಷಮೆ ಕೇಳದಂತಹ ತಪ್ಪು ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ ಅವರು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಅಕ್ರಮ ಎಸಗಿದ್ದಾರೆ. ಅವರು ತಕ್ಷಣವೇ ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಅವರನ್ನು ಬಂಧಿಸಬೇಕು ಎಂದು ಹರಿಪ್ರಸಾದ್ ಒತ್ತಾಯಿಸಿದರು.

ಮುಖ್ಯ ಆಯುಕ್ತರ ನಡೆಯ ಬಗ್ಗೆ ಕಾಂಗ್ರೆಸ್‌ನ ರಾಹುಲ್‌ಗಾಂಧಿ ಅವರು ಫೆಬ್ರವರಿ 25 ರಂದೇ ಪತ್ರ



ಬರೆದಿದ್ದರು. ಆದರೆ ಆಯೋಗ ಆ ಪತ್ರಕ್ಕ ಗೌರವ ಕೊಟ್ಟಿರಲಿಲ್ಲ.ಪ್ರಜಾಪ್ರಭುತ್ವಸಂವಿದಾನವಿರೋಧವಾಗಿ ಇವರು ನಡೆದುಕೊಂಡಿದ್ದಾರೆ. ಇದನ್ನು ನಾವು ದೇಶ ದ್ರೋಹ ಎಂದು ಕರೆಯಲೇಬೇಕು ಎಂದರು.

ಬಿಜೆಪಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಎಸ್‌ಐಆರ್ ನಡೆಸಲಾಗಿದೆ. ಈ ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳಿಯಪ್ಪನವರ್, ಕೇಂದ್ರ ಚುನಾವಣಾ ಆಯೋಗ ಅಕ್ರಮ ಎಸಗಿದೆ. ಮುಖ್ಯ ಆಯುಕ್ತರ ನಡೆಯ ವಿರುದ್ಧ ಇನ್ನಿಬ್ಬರು ಆಯುಕ್ತರು ಧ್ವನಿ ಎತ್ತಿದ್ದಾರೆ. ಎಸ್‌ಐಆರ್‌ನ್ನು ರದ್ದುಪಡಿಸಬೇಕು ಎಂದು ಅವರು ಒತ್ತಾಯಿಸಿದರು

ರಾಜ್ಯದಲ್ಲೂ ಎಸ್‌ಐಆರ್ ಅಕ್ರಮ ನಡೆದಿದೆ. ಈ ಎಸ್‌ಐಆರ್‌ನ್ನು ರದ್ದುಪಡಿಸುವಂತೆ ಅವರು ಒತ್ತಾಯಿಸಿದರು.

ಶಾಲೆ ಆವರಣ ಸ್ವಚ್ಛವಾಗಿಟ್ಟುಕೊಳ್ಳಿ, ಕೀಟಜನ್ಯ ರೋಗಗಳ ಬಗ್ಗೆ ಜಾಗೃತಿ

ಹಿರೇಕೆರೂರ: 'ಸೊಳ್ಳೆಗಳು ಉತ್ಪತ್ತಿಯಾಗದಂತೆ ಶಾಲಾ ಆವರಣ ಹಾಗೂ ವಸತಿ ನಿಲಯಗಳ ಸುತ್ತಮುತ್ತ ನೀರು ನಿಲ್ಲದಂತೆ ಸ್ವಚ್ಛತೆ ಕಾಪಾಡಬೇಕು. ಸೊಳ್ಳೆ ಪರದೆ ಬಳಸಬೇಕು ಹಾಗೂ ವೈಯಕ್ತಿಕ ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು' ಎಂದು ಜಿಲ್ಲಾ ಆರೋಗ್ಯ ನಿರೀಕ್ಷಣಾಧಿಕಾರಿ ರವಿ ಕೆ.ಆರ್. ಹೇಳಿದರು.

ತಾಲ್ಲೂಕಿನ ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗಳಲ್ಲಿ ಕೀಟಜನ್ಯ ರೋಗಗಳ ಕುರಿತು ಗುರುವಾರ ನಡೆದ ವಿದ್ಯಾರ್ಥಿಗಳಿಗೆ ಆರೋಗ್ಯ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಾಲಾ ಆವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವುದರ ಜೊತೆಗೆ,



ಸೊಳ್ಳೆಗಳ ಸಂತಾನೋತ್ಪತ್ತಿಗೆ ಅನುಕೂಲವಾಗುವ ನೀರು ಸಂಗ್ರಹವಾಗದಂತೆ ನಿಯಮಿತವಾಗಿ ಪರಿಶೀಲಿಸಬೇಕು.ವಿದ್ಯಾರ್ಥಿಗಳುಆರೋಗ್ಯ ಇಲಾಖೆಯ ಮಾರ್ಗಸೂಚಿಗಳನ್ನು ಪಾಲಿಸುವ ಮೂಲಕ ರೋಗಗಳ ಹರಡುವಿಕೆಯನ್ನು ತಡೆಗಟ್ಟಲು ಸಹಕರಿಸಬೇಕು' ಎಂದು ಹೇಳಿದರು.

ಮಕ್ಕಳು ಜ್ವರ, ತಲೆನೋವು, ಮೈಕೈ ನೋವು ಸೇರಿದಂತೆಯಾವುದೇಆರೋಗ್ಯಸಮಸ್ಯೆಯ ಲಕ್ಷಣಗಳು ಕಂಡುಬಂದಲ್ಲಿ ನಿರ್ಲಕ್ಷ್ಯ ಮಾಡದೆ ಕೂಡಲೇ ಆರೋಗ್ಯ ಸಿಬ್ಬಂದಿ ಅಥವಾ ವೈದ್ಯರನ್ನು ಸಂಪರ್ಕಿಸಬೇಕು' ಎಂದು ತಿಳಿಸಿದರು.

ಮೊರಾರ್ಜಿ ದೇಸಾಯಿ ಶಾಲೆಯ ವಿಜ್ಞಾನ ಶಿಕ್ಷಕ ಶಿವಶಂಕರ ಮಾಕನೂರ ಮತ್ತು ಕಿತ್ತೂರು ರಾಣಿ ಚನ್ನಮ್ಮ ವಸತಿ ವಿಜ್ಞಾನ ಶಿಕ್ಷಕ ಲೋಹಿತ್ ಬಿ ಅವರನ್ನು ನೋಡಲ್ ಶಿಕ್ಷಕರನ್ನಾಗಿ ನೇಮಿಸಲಾಯಿತು.

ತಾಲ್ಲೂಕು ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಎಚ್. ದುಗ್ಗತಿ , ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲ ಮಾಂತೇಶ ಕೆಲ್ಲೂರ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆ ಪ್ರಾಂಶುಪಾಲ ನಾಗರಾಜ , ಪ್ರಭು ಕೆಂಚಳ್ಳೇರ ಇದ್ದರು.

ಬ್ಯಾಡಗಿ ಎಪಿಎಂಸಿ ಪ್ರಾಂಗಣದಲ್ಲಿ ಬಾಲಕಾರ್ಮಿಕ ಪದ್ಧತಿ ವಿರುದ್ಧ ಜಾಗೃತಿ ಜಾಥಾ



ಬ್ಯಾಡಗಿ: ಇಲ್ಲಿಯ ಎಪಿಎಂಸಿ ಪ್ರಾಂಗಣದಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿ ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಶುಕ್ರವಾರ ಜಾಗೃತಿ ಜಾಥಾ ನಡೆಸುವ ಮೂಲಕ ವರ್ತಕರಲ್ಲಿ ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಯಿತು.

ಎಪಿಎಂಸಿ ಕಚೇರಿಯಿಂದ ಹೊರಟ ಜಾಥಾ ಪ್ರಾಂಗಣದ ಎಲ್ಲ ವಿಭಾಗದಲ್ಲಿಯೂ ಸಂಚರಿಸಿತು. ಬಾಲ ಕಾರ್ಮಿಕರು ಕಂಡು ಬಂದಲ್ಲಿ ಕಾರ್ಮಿಕ ಇಲಾಖೆಗೆ ಮಾಹಿತಿ ನೀಡುವಂತೆ ಘೋಷಣೆ ಕೂಗಲಾಯಿತು.

ಬಡತನ, ಕುಟುಂಬದ ಆರ್ಥಿಕ ಸಂಕಷ್ಟ ಸೇರಿದಂತೆ ವಿವಿಧ ಕಾರಣಗಳಿಂದ ಮಕ್ಕಳು ದುಡಿಮೆಗೆ ಸೇರುವ ಸಾಧ್ಯತೆಗಳಿವೆ. ಇಂತಹ ಮಕ್ಕಳನ್ನು ಗುರುತಿಸಿ ಅವರಿಗೆ ಶಿಕ್ಷಣ ಹಾಗೂ ಅಗತ್ಯ ನೆರವು ದೊರಕಿಸುವ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆ ಕಾರ್ಯನಿರ್ವಹಿಸುತ್ತಿದೆ. ಪ್ರಾಂಗಣದ ಯಾವುದೇ ಅಂಗಡಿ, ಹೋಟೆಲ್, ಗ್ಯಾರೇಜ್, ಕಾರ್ಖಾನೆ ಹಾಗೂ ವಾಣಿಜ್ಯ ಮಳಿಗೆಯಲ್ಲಿ ಬಾಲ ಕಾರ್ಮಿಕರನ್ನು ಕೆಲಸಕ್ಕೆ ಬಳಸಿಕೊಳ್ಳುವುದು ಅಪರಾಧವಾಗಿದ್ದು ಅಂತವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಜರುಗಿಸುವ ಎಚ್ಚರಿಕೆಯನ್ನು ಈ ಸಂದರ್ಭದಲ್ಲಿ ನೀಡಲಾಯಿತು.

ಬಾಲಕಾರ್ಮಿಕ ಪದ್ಧತಿ ದುಷ್ಪರಿಣಾಮ ಮತ್ತು ಕಿಶೋರ ಕಾರ್ಮಿಕರ ನಿಯೋಜನೆಗೆ ಸಂಬಂಧಿಸಿದ ಕಾನೂನುಗಳ ಕುರಿತು ವಿವರವಾಗಿ ಪ್ರಚಾರ ಮಾಡಲಾಯಿತು.


ಮಕ್ಕಳನ್ನು ದುಡಿಯಲು ಬಳಸಿಕೊಳ್ಳದೆ ಅವರನ್ನು ಶಾಲೆಗೆ ಕಳಿಸಿ ಶಿಕ್ಷಣ ನೀಡುವ ವಾತಾವರಣ ನಿರ್ಮಾಣ ಮಾಡಬೇಕು. ತಮ್ಮ ಮಕ್ಕಳಿಗೆ ತಂದೆ, ತಾಯಿಗಳು ಶಿಕ್ಷಣ ನೀಡಬೇಕು. ಬಾಲಕಾರ್ಮಿಕರು ಕಂಡು ಬಂದಲ್ಲಿ ಮಕ್ಕಳ ರಕ್ಷಣೆ ಹಾಗೂ ಪುನರ್ವಸತಿಗೆ ಸಾರ್ವಜನಿಕರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿಕೊಳ್ಳಲಾಯಿತು. ಈ ವೇಳೆ ಎಪಿಎಂಸಿ ಸಿಬ್ಬಂದಿ, ಕಾರ್ಮಿಕ ಇಲಾಖೆ, ಜಿಲ್ಲಾ ಮಕ್ಕಳ ಸಹಾಯವಾಣಿಯ ಸಂಯೋಜಕರು, ಆಪ್ತ ಸಮಾಲೋಚಕರು ಇದ್ದರು.

ಸಮಾಜದ ಅಭಿವೃದ್ಧಿಗೆ ಶ್ರಮಿಸಲು ಸಲಹೆ: ಜಿ.ಜಿ. ಹೊಟ್ಟಿಗೌಡ್ರ

ರಾಣೆಬೆನ್ನೂರು: ಹಿರಿಯ ಜಗದ್ಗುರುಗಳ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ವ್ಯಕ್ತಿ ಮತ್ತು ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ವರ್ತಕರ ಸಂಘದ ಮಾಜಿ ಅಧ್ಯಕ್ಷ ಜಿ.ಜಿ. ಹೊಟ್ಟಿಗೌಡ್ರ ಹೇಳಿದರು.

ನಗರದ ಹೊಸಮನಿ ಸಿದ್ದಪ್ಪ ಪಿಯು ಕಾಲೇಜಿನಲ್ಲಿ ಈಚೆಗೆ ನಡೆದ ಲಿಂ.ಶಿವಕುಮಾರ ಶಿವಾಚಾರ್ಯ ಸ್ವಾಮೀಜಿ ಅವರ 35ನೇ ಶ್ರದ್ಧಾಂಜಲಿ ಕಾರ್ಯಕ್ರಮದ ಪ್ರಯುಕ್ತ ಪ್ರಾದೇಶಿಕ ವಲಯ ಮಟ್ಟದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾಮೀಜಿ ಅವರ ಸಾಮಾಜಿಕ ಚಿಂತನೆಗಳಲ್ಲಿ



ಶಿಕ್ಷಣ, ಸಂಸ್ಕಾರ, ಸೇವೆ ಮತ್ತು ಸಮಾಜದ ಏಕತೆಗೆ ವಿಶೇಷ ಸ್ಥಾನವಿತ್ತು. ಯುವಜನರು ಉತ್ತಮ ಗುಣ ಬೆಳೆಸಿಕೊಂಡು ಸಮಾಜದ ಅಭಿವೃದ್ಧಿಗೆ ತಮ್ಮ ಕೊಡುಗೆ ನೀಡಬೇಕು' ಎಂದರು.

ಸ್ಥಳೀಯ ಸಲಹಾ ಸಮಿತಿಯ ಅಧ್ಯಕ್ಷ ಉಮೇಶ ಮ. ಗುರುಲಿಂಗಪ್ಪಗೌಡ್ರು ಮಾತನಾಡಿ, 'ಸಮಾಜದಲ್ಲಿ ಎಲ್ಲರೂ ಪರಸ್ಪರ ಗೌರವದಿಂದ, ಪ್ರೀತಿ ಮತ್ತು ಸಹೋದರತ್ವದಿಂದ ಬದುಕಬೇಕು. ಬಡವರು, ದುರ್ಬಲರು ಮತ್ತು ಅಗತ್ಯವಿರುವವರಿಗೆ ನೆರವಾಗುವುದು ನಿಜವಾದ ಧರ್ಮ ಎಂಬ ಭಾವನೆಯನ್ನು ಸ್ವಾಮೀಜಿ ಜನರಲ್ಲಿ ಮೂಡಿಸಿದರು. ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ನೀಡುವುದಕ್ಕಾಗಿ ಶಿಕ್ಷಣ ಸಂಸ್ಥೆಗಳನ್ನು ತೆಗೆದರು' ಎಂದರು.


ಪ್ರಾಚಾರ್ಯ ಹಳದಪ್ಪ, ಮಂಜು ನಾಥ್, ಎಚ್. ಓಂಕಾರ್ ನಾಯಕ್, ಆಶಾ ಆರ್. ಎಸ್.,ರೇವಣ್ಣ,ಎಚ್.ಶಿವಾನಂದ,ಪ್ರವೀಣ್ ಪಾಟೀಲ್, ಸುಪ್ರಿಯಾ ಇದ್ದರು.

ನಿರುದ್ಯೋಗ ತಡೆಗೆ ಯುವನಿಧಿ ನೆರವು: ಶಾಸಕ ಯಾಸೀರ್ ಅಹ್ಮದಖಾನ್ ಪಠಾಣ

ಶಿಗ್ಗಾವಿ: ನಿರುದ್ಯೋಗ ಪ್ರಮಾಣ ಹೆಚ್ಚಳ ತಡೆಗೆ ನೆರವಾಗಲಿ ಎಂಬ ಉದ್ದೇಶದಿಂದ ಯುವನಿಧಿ ಯೋಜನೆಯನ್ನು ಜಾರಿಗೆ ತರಲಾಗಿದೆ. ಅದರಿಂದ ಪದವೀಧರ ಯುವಕರುಸ್ವಾವಲಂಬನೆಬದುಕುನಡೆಸಲು ಸಾಧ್ಯವಾಗಿದೆ. ಅರ್ಹ ಯುವಕರು ಅದರ ಪ್ರಯೋಜನ ಪಡೆಯಲು ಮುಂದಾಗಬೇಕು ಎಂದು ಶಾಸಕ ಯಾಸೀರ್ ಅಹ್ಮದಖಾನ್ ಪಠಾಣ ಹೇಳಿದರು.

ತಾಲ್ಲೂಕಿನ ಬಂಕಾಪುರ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ನಡೆದ ಯುನಿಧಿ ಯೋಜನೆ ವಿಶೇಷ ಅಭಿಯಾನ, ಗ್ರಂಥಾಲಯ ಕಟ್ಟಡ, ಕಂಪೌಂಡ ಹಾಗೂ ವಿವಿಧ ಯೋಜನೆಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾಲೇಜಿನ ಗ್ರಂಥಾಲಯದ ಪ್ರತ್ಯೇಕ ಕಟ್ಟಡಕ್ಕೆ ?40 ಲಕ್ಷ ಅನುದಾನ ಬಿಡುಗಡೆ ಮಾಡಿದೆ. ಕಾಲೇಜಿನ ಮೈದಾನ, ಕಂಪೌಂಡ್,



ಪಾಠೋಪಕರಣ, ಪೀಠೋಪಕರಣಗಳು ಸೇರಿದಂತೆ ವಿವಿಧ ಯೋಜನೆಗಳಿಗೆ ಹೆಚ್ಚಿನ ಅನುದಾನ ನೀಡಲಾಗುವುದು.

ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಕ್ಷೇತ್ರದಲ್ಲಿ ಪ್ರಸಕ್ತ ವರ್ಷ ಶೈಕ್ಷಣಿಕ ಕ್ರಾಂತಿ ನಡೆದಿದೆ ಎಂದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ಉಚಿತ ಬಸ್ ಪಾಸ್ ನೀಡಿದ್ದಾರೆ. ಅಲ್ಲದೆ ಕ್ಷೇತ್ರದಲ್ಲಿ 51 ಭಾರತ ಜೋಡು ಸಂಘಟನೆಗಳನ್ನು ಆರಂಭಿಸಲಾಗುತ್ತಿದೆ. ಅವುಗಳಿಗೆ ಪ್ರತಿ ವರ್ಷ ?10 ಲಕ್ಷ ಅನುದಾನ ನೀಡಲಾಗುತ್ತಿದೆ. ಈ ಸಂಘಗಳ ಮೂಲಕ ಸಂಘಟನಾತ್ಮಕ ಶಕ್ತಿ ನೀಡುವ ಕೆಲಸ ಮಾಡಲಾಗುತ್ತಿದೆ. ಅಲ್ಲದೆ ಕೌಶಲಾಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ರಮೇಶ ತೆವರಿ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪುರಸಭೆ ಅಧ್ಯಕ್ಷೆ ಮಮತಾ ಮಾಗಿ, ಗ್ಯಾರಂಟಿ ಯೋಜನೆ ತಾಲ್ಲೂಕು ಅಧ್ಯಕ್ಷ ಎಸ್.ಎಫ್. ಮಣಕಟ್ಟಿ, ಉಪಾಧ್ಯಕ್ಷ ಗುಡ್ಡಪ್ಪ ಜಲದಿ, ಕಾಂಗ್ರೆಸ್ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ವಸಂತಾ ಬಾಗೂರ, ಲಲಿತಾ ಹಂಜಗಿ, ಸೋಮು ಕುರಿ, ಪುರಸಭೆ ಸದಸ್ಯರಾದ ಸತೀಶ ಆಲದಕಟ್ಟಿ, ರಮೇಶ ಸಿದ್ದನವರ, ಮುಖ್ಯಾಧಿಕಾರಿ ಮಲ್ಲೇಶಪ್ಪ ಆರ್, ಚಂದ್ರಶೇಖರ ಮಾನೋಜಿ, ಪ್ರೊ.ನಿಂಗಪ್ಪ ಕಲಕೋಟಿ, ಪ್ರೊ.ವಿಜಯಕುಮಾರ ಗುಡಿಗೇರಿ, ಫಕ್ಕೀರೇಶ ಜಾಲಿಹಾಳ, ದಿನೇಶ ಸಿಂಗಾಪುರ, ನಾಜನೀನ್ ಹಿರೇಕುಂಬಿ, ಮಂದಾಕಿನಿ ಪಾಟೀಲ, ಬಿಬಿ ಫಾತಿಮಾ ಸೇರಿದಂತೆ ಕಾಲೇಜಿನ ಎಲ್ಲ ಉಪನ್ಯಾಸಕರು, ಸಿಬ್ಬಂದಿ ಇದ್ದರು.

ಅಕ್ರಮ ಗಣಿಗಾರಿಕೆ: ಸಚಿವ ರುದ್ರಪ್ಪ ಲಮಾಣಿಗೆ 3 ಕೋಟಿ ದಂಡ

ಹಾವೇರಿ: ಪರವಾನಗಿ ನಿಯಮಗಳನ್ನು ಉಲ್ಲಂಘಿಸಿ ಕಲ್ಲು ಗಣಿಗಾರಿಕೆ ನಡೆಸಿದ್ದ ಆರೋಪದಡಿ, ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ರಾಜ್ಯದ ಸಕ್ಕರೆ? ಜವಳಿ ಸಚಿವ ರುದ್ರಪ್ಪ ಲಮಾಣಿ ಅವರಿಗೆ ಸುಮಾರು 3 ಕೋಟಿ ದಂಡ ವಿಧಿಸಲಾಗಿದೆ.



ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಹುಣಸಿಕಟ್ಟಿ ಬಳಿಯಲ್ಲಿ ಕ್ವಾರಿ ನಡೆಸಲು ರುದ್ರಪ್ಪ ಲಮಾಣಿ ಅವರು ಹಲವು ವರ್ಷಗಳ ಹಿಂದೆಯೇ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಪರವಾನಗಿ ಪಡೆದು-ಕೊಂಡಿದ್ದಾರೆ. ಅದೇ ಜಾಗದಲ್ಲಿ ಕ್ವಾರಿಯನ್ನೂ ನಡೆಸುತ್ತಿದ್ದಾರೆ.

ಇದೇ ಕ್ವಾರಿಯಲ್ಲಿ ಅಕ್ರಮವಾಗಿ ಗಣಿಗಾರಿಕೆ ನಡೆಸಿ ಪರವಾನಗಿನಿಯಮಉಲ್ಲಂಘಿಸಿರುವುದನ್ನುದಾಖಲೆ ಸಮೇತ ಪತ್ತೆ ಮಾಡಿರುವ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು, ರುದ್ರಪ್ಪ ಲಮಾಣಿ ಅವರಿಗೆ ನೋಟಿಸ್ ನೀಡಿದ್ದಾ-ರೆ. 'ಆರು ತಿಂಗಳ ಒಳಗಾಗಿ, ಸುಮಾರು 3 ಕೋಟಿ ದಂಡವನ್ನು ಪಾವತಿಸಬೇಕು' ಎಂದು ಸೂಚಿಸಿದ್ದಾರೆ.

ಸುಮಾರು ವರ್ಷಗಳ ಹಿಂದೆಯೇ ರುದ್ರಪ್ಪ ಲಮಾಣಿ ಅವರು ತಮ್ಮ ಹೆಸರಿನಲ್ಲಿಯೇ ಕ್ವಾರಿಗೆ ಅನುಮತಿ ಪಡೆದುಕೊಂಡಿದ್ದಾರೆ. ಪರವಾನಗಿ ಮೀರಿ, ಹೆಚ್ಚಿನ ಪ್ರಮಾಣದಲ್ಲಿ ಕಲ್ಲು ಹೊರತೆಗೆದು ಸಾಗಿಸಿರುವುದು ಗೊತ್ತಾಗಿದೆ. ಹೀಗಾಗಿ, ಅವರಿಗೆ ಇತ್ತೀಚೆಗೆ ನೋಟಿಸ್ ನೀಡಲಾಗಿದೆ. ಮೂರು ಕಂತುಗಳನ್ನು ದಂಡ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ' ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಮೂಲಗಳು ತಿಳಿಸಿವೆ.

ಬೋಧಕೇತರ ಕಾರ್ಯದಿಂದ ಶಿಕ್ಷಕರಿಗೆ ಮಾನಸಿಕ, ದೈಹಿಕ ಒತ್ತಡ: ಶಾಸಕ ಮಾನಪ್ಪ ವಜ್ಜಲ್



ಲಿಂಗಸುಗೂರು: 'ಶಿಕ್ಷಕರು ಕೇವಲ ಬೋಧನೆಗೆ ಸೀಮಿತಗೊಳಿಸದೇ ಹಲವಾರು ಬೋಧಕೇತರ ಕಾರ್ಯಗಳಲ್ಲಿ ಬಳಕೆ ಮಾಡುತ್ತಿದ್ದರಿಂದ ಅವರ ಮೇಲಿನ ಮಾನಸಿಕ ಮತ್ತು ದೈಹಿಕ ಒತ್ತಡ ಹೆಚ್ಚುತ್ತಿದೆ. ಇದನ್ನು ಕಡಿಮೆಗೊಳಿಸಲು ಶಿಕ್ಷಣ ಸಚಿವರಿಗೆ ಒತ್ತಾಯ ಮಾಡುವೆ' ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು.

ಪಟ್ಟಣದ ವಿಜಯ ಮಹಾಂತೇಶ್ವರ ಶಾಖಾಮಠದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ, ಕ್ರೀಡಾಕೂಟ, ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆ ಅಕ್ಷರ ಜ್ಞಾನದ ಜತೆಗೆ ಸಂಸ್ಕೃತಿ, ಸಂಸ್ಕಾರ, ನೀತಿ ಪಾಠ ಬೋಧಿಸುವ ಶಿಕ್ಷಕರಿಗೆ ಬಿಸಿಯೂಟದ ಉಸ್ತುವಾರಿ, ಚುನಾವಣೆ ಕರ್ತವ್ಯ, ವಿವಿಧ ಸಮೀಕ್ಷೆಗಳ ಜವಾಬ್ದಾರಿ ಸೇರಿದಂತೆ ದಿನಕ್ಕೊಂದು ನಾನಾ ರೀತಿ ಕೆಲಸಗಳನ್ನು ಹೊರೆಸುತ್ತಿದ್ದರಿಂದ ಅವರಿಗೆ ಅಧಿಕ ಒತ್ತಡವಾಗುತ್ತಿದೆ. ಒತ್ತಡ ಕಡಿಮೆ ಮಾಡಿ ಶಿಕ್ಷಕರಿಗೆ ಬೋಧನೆ ಸೀಮಿತಗೊಳಿಸುವಂತೆ ಸರ್ಕಾರಕ್ಕೆ ಒತ್ತಡ ಹಾಕುವೆ' ಎಂದರು.

ವಿಧಾನಪರಿಷತ್ ಸದಸ್ಯ ಶರಣಗೌಡ ಪಾಟೀಲ ಬಯ್ಯಾಪುರ ಮಾತನಾಡಿ, 'ಸಾರ್ವಜನಿಕ ಜೀವನದಲ್ಲಿ ಶಾಸಕರು ಎಷ್ಟೇ ಅಭಿವೃದ್ಧಿ ಕೆಲಸ ಮಾಡಿದರೂ ನೆನಪಿಸಿಕೊಳ್ಳುವುದಿಲ್ಲ, ಆದರೆ ಶಿಕ್ಷಣ ಕಲಿಸಿದ ಶಿಕ್ಷಕರನ್ನು ಜೀವ ಇರೋವರಿಗೂ ನೆನಪಿಸುತ್ತಾರೆ. ಶಿಕ್ಷಕರ ಹೆಸರು ಶಾಶ್ವತವಾಗಿ ಇರುತ್ತದೆ' ಎಂದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಪಾಮಯ್ಯ ಮುರಾರಿ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಸಿದ್ಧರಾಮೇಶ ಪಾಗದ, ಟಿಎಪಿಎಂಎಸ್ ಅಧ್ಯಕ್ಷ ಶಶಿಧರ ಪಾಟೀಲ ಆಶಿಹಾಳ, ಸಹಾಯಕ ಆಯುಕ್ತ ನಾಗೇಂದ್ರಕುಮಾರ ಬಾಬು, ಬಿಇಒ ಸುಜಾತಾ ಹೂನೂರು, ಕ್ಷೇತ್ರ ಸಮನ್ವಯಾಧಿಕಾರಿ ಹನುಮಂತಪ್ಪ ಕ್ವಾರಿ, ಅಕ್ಷರ ದಾಸೋಹ ಎಡಿ ಮಾರ್ಟಿನ್ ಅಮಲರಾಜ್, ದೈಹಿಕ ಶಿಕ್ಷಣ ಪರಿವೀಕ್ಷಕ ಚಂದ್ರಶೇಖರ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಹಾಜಿಬಾಬು, ಶರಣಗೌಡ ಅಗಸಿಮಂದಿನ, ಪ್ರಭುಲಿಂಗ ಗದ್ದಿ, ಬಸಪ್ಪ ಹಂದ್ರಾಳ, ಗುರುಸಂಗಯ್ಯ ಗಣಾಚಾರಿ, ಸಂಗಪ್ಪ ಅಡವಿಭಾವಿ ಇನ್ನಿತರರಿದ್ದರು.

ಕೊಲೆ ಅತ್ಯಾಚಾರ ಪ್ರಕರಣಗಳ ತನಿಖೆಯನ್ನು ಸಿಐಡಿಗೆ ವಹಿಸುವಂತೆ ಒತ್ತಾಯಿಸಿ ಪ್ರತಿಭಟನೆ



ರಾಯಚೂರು: ಹದ್ದಿನಾಳ ಗ್ರಾಮದ ಭೂಮಾನಂದ ಕಗ್ಗೋಲೆ ಹಾಗೂ ಹೊಕ್ರಾಣಿ ಗ್ರಾಮದ ಅಶ್ವಿನಿ ಮತ್ತು ಕರಡಕಲ್ ಗ್ರಾಮದ ರಾಣೆಮ್ಮ ಅವರ ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳ ಸಮಗ್ರ ತನಿಖೆಯನ್ನು ಸಿಐಡಿಗೆ ವಹಿಸಬೇಕು ಎಂದು ಒತ್ತಾಯಿಸಿ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದ ಟಿಪ್ಪು ಸುಲ್ತಾನ್ ಉದ್ಯಾನದಲ್ಲಿ ಪ್ರತಿಭಟನೆ ನಡೆಸಿದರು.

ಪ್ರತಿಭಟನಾಕಾರರು ಮೂರು ಪ್ರಕರಣಗಳಲ್ಲಿನ ಎಲ್ಲಾ ಆರೋಪಿಗಳನ್ನು ಕೂಡಲೇ ಬಂಧಿಸಿ, ನಿಷ್ಪಕ್ಷಪಾತ ತನಿಖೆ ನಡೆಸಬೇಕು. ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಕೌಂಟ–ರ್ ಪ್ರಕರಣ ದಾಖಲಿಸುವ ಪದ್ಧತಿಯನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

2026ರ ಆಗಸ್ಟ್ 19ರಂದು ಹೊಕ್ರಾಣಿ ಗ್ರಾಮದ ಅಶ್ವಿನಿ ಹಾಗೂ ಕರಡಕಲ್ ಗ್ರಾಮದ ರಾಣೆಮ್ಮ ಅವರ ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳು ನಡೆದಿದ್ದು, ಹದ್ದಿನಾಳ ಗ್ರಾಮದಲ್ಲಿ ಭೂಮಾನಂದ ಕಗ್ಗೋಲೆ ಪ್ರಕರಣವೂ ಸಂಭವಿಸಿದೆ. ಈ ಮೂರು ಪ್ರಕರಣಗಳ ತನಿಖೆಯನ್ನು ಸಿಐಡಿಗೆ ವಹಿಸುವಂತೆ ಹಾಗೂ ಎಲ್ಲಾ ಆರೋಪಿಗಳನ್ನು ಬಂಧಿಸುವಂತೆ ಆಗಸ್ಟ್ 24ರಂದು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಗಿತ್ತು.

ಆದರೂ ಕೆಲವು ಆರೋಪಿಗಳನ್ನು ಇದುವರೆಗೆ ಬಂಧಿಸದಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಪ್ರಕರಣಗಳಿಗೆ ಸಂಬಂಧಿಸಿದಂತೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ಗೃಹ ಇಲಾಖೆ ಅಗತ್ಯ ಕ್ರಮ ಕೈಗೊಂಡಿಲ್ಲ. ಕೆಲವು ಆರೋಪಿಗಳನ್ನು ಬಂಧಿಸದಿರುವುದರಿಂದ ಅವರ ಹೆಸರುಗಳನ್ನು ಆರೋಪಪಟ್ಟಿಯಿಂದ ಕೈಬಿಡುವ ಸಾಧ್ಯತೆ ಇದೆ ಎಂಬ ಅನುಮಾನ ವ್ಯಕ್ತವಾಗಿದ್ದು, ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳ ಇತ್ತೀಚಿನ ಹೇಳಿಕೆಗಳು ಈ ಅನುಮಾನವನ್ನು ಮತ್ತಷ್ಟು ಬಲಪಡಿಸಿವೆ ಎಂದು ಪ್ರತಿಭಟನಾಕಾರರು ಹೇಳಿದರು.

ದೇವದುರ್ಗ, ಸಿರವಾರ ಹಾಗೂ ಮಾನ್ವಿ ತಾಲೂಕುಗಳ ದಲಿತ ಮುಂಚೂಣಿ ಹೋರಾಟಗಾರರಿಗೆ ಸೂಕ್ತ ಪೊಲೀಸ್ ಭದ್ರತೆ ಒದಗಿಸಬೇಕು. ಭದ್ರತೆ ನೀಡಲು ಸಾಧ್ಯವಾಗದಿದ್ದರೆ ಆತ್ಮರಕ್ಷಣೆಗಾಗಿ ಶಸ್ತ್ರಾಸ್ತ್ರ ಹೊಂದಲು ಪರವಾನಗಿ ನೀಡಬೇಕು ಎಂದು ಅವರು ಆಗ್ರಹಿಸಿದರು.

ದಲಿತರ ಆತ್ಮರಕ್ಷಣೆಗಾಗಿ ಪ್ರತ್ಯೇಕ ರೆಜಿಮೆಂಟ್ ಸ್ಥಾಪಿಸಲು ಸರ್ಕಾರ ಅನುಮತಿ ನೀಡಬೇಕು. ಜೊತೆಗೆ ರಾಯಚೂರು ಜಿಲ್ಲೆಯನ್ನು ದಲಿತರ ಮೇಲಿನ ದೌರ್ಜನ್ಯ ಪೀಡಿತ ಜಿಲ್ಲೆ ಎಂದು ಘೋಷಿಸಿ, ಅವರ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ವಕೀಲ ಎಸ್.ಮಾರೆಪ್ಪ, ರವೀಂದ್ರನಾಥಪಟ್ಟಿ,ಕೆ.ಜಿ.ವೀರೇಶ,ಶಿವರಾಯ, ನರಸಪ್ಪದಂಡೋರಾ,ಹೇಮರಾಜ್,ದುಳ್ಳಯ್ಯ ದಂಡೋರಾ, ನರಸಿಂಹಲು, ಎಂ. ಈರಣ್ಣ, ಆಂಜನೇಯ ಕುರುಬದೊಡ್ಡಿ, ಶರಣಪ್ಪ ದಿನ್ನಿ, ಶ್ರೀನಿವಾಸ ಕಲವಲದೊಡ್ಡಿ, ಅಮರೇಗೌಡ, ಹುಲಿಗೆಪ್ಪ, ವಿಶ್ವನಾಥ ಪಟ್ಟಿ, ಎಂ.ಆರ್. ಭೇರಿ, ಶ್ರೀನಿವಾಸ ಕೊಪ್ಪರ, ನಾಗರಾಜ ರಾಂಪೂರು, ಎಸ್.ಕೆ. ಕೃಷ್ಣ, ತಾಯಪ್ಪ, ಪ್ರವೀಣ ಸೇರಿದಂತೆ ಸಂಘಟನೆಗಳ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಕಲ್ಯಾಣ ಕರ್ನಾಟಕಕ್ಕೆ ಕೇಂದ್ರದಿಂದ 5 ಸಾವಿರ ಕೋಟಿ ರೂ. ನೀಡಲಿ : ಸಚಿವ ಡಾ.ಅಜಯ್ ಧರಂಸಿಂಗ್



ರಾಯಚೂರು : ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ರಾಜ್ಯ ಸರಕಾರ 5 ಸಾವಿರ ಕೋಟಿ ರೂ. ಅನುದಾನ ನೀಡುತ್ತಿದ್ದು, ಕೇಂದ್ರ ಸರಕಾರವೂ ಇದೇ ಪ್ರಮಾಣದ ಅನುದಾನ ನೀಡಬೇಕು ಎಂದು ಸಚಿವ ಡಾ.ಅಜಯ್ ಧರಂಸಿಂಗ್ ಆಗ್ರಹಿಸಿದರು.

ಕರ್ನಾಟಕದ ಬಜೆಟ್ ಸುಮಾರು 4.48 ಲಕ್ಷ ಕೋಟಿ ರೂ. ಇದ್ದು, ಅದರಲ್ಲಿ ಕಲ್ಯಾಣ ಕರ್ನಾಟಕಕ್ಕೆ 5 ಸಾವಿರ ಕೋಟಿ ರೂ. ಮೀಸಲಿಡಲಾಗುತ್ತಿದೆ. ಕೇಂದ್ರ ಸರಕಾರದ ಬಜೆಟ್ ಸುಮಾರು 52 ಲಕ್ಷ ಕೋಟಿ ರೂ. ಇದೆ. ಹೀಗಾಗಿ ಕೇಂದ್ರ ಸರಕಾರವೂ ಕಲ್ಯಾಣ ಕರ್ನಾಟಕಕ್ಕೆ 5 ಸಾವಿರ ಕೋಟಿ ರೂ. ನೀಡಿದರೆ ಒಟ್ಟು 10 ಸಾವಿರ ಕೋಟಿ ರೂ. ಅನುದಾನ ದೊರೆಯಲಿದ್ದು, ಈ ಭಾಗದ ಅಭಿವೃದ್ಧಿಗೆ ಇನ್ನಷ್ಟು ವೇಗ ಸಿಗಲಿದೆ ಎಂದರು.

ಮೋದಿಯವರ ಕೊಡುಗೆ ಏನು?" ಎಂದು ಪ್ರಶ್ನಿಸಿದ ಅವರು, ಕಳೆದ 12?13 ವರ್ಷಗಳಿಂದ ನರೇಂದ್ರ ಮೋದಿ ಅವರು ಅಧಿಕಾರದಲ್ಲಿದ್ದಾರೆ. 2014ರಲ್ಲಿ ಕರ್ನಾಟಕದಿಂದ 17 ಸಂಸದರು ಆಯ್ಕೆಯಾಗಿದ್ದರು. 2019ರಲ್ಲಿ 26 ಎನ್‌ಡಿಎ ಸಂಸದರು ಆಯ್ಕೆಯಾಗಿದ್ದರು.

ಈಗಲೂ 19 ಸಂಸದರು ಇದ್ದಾ–ರೆ. ಆದರೆ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಕೇಂದ್ರದಿಂದ ಹೆಚ್ಚಿನ ಅನುದಾನ ತರುವ ಕುರಿತು ಯಾರೂ ಧ್ವನಿ ಎತ್ತುತ್ತಿಲ್ಲ ಎಂದು ಟೀಕಿಸಿದರು.

ಬಿಜೆಪಿ ನಾಯಕರ ಬಳಿ ಯಾವುದೇ ದಾಖಲೆಗಳಿಲ್ಲ :

ಕೆಪಿಎಸ್‌ಸಿ ನೇಮಕಾತಿ ಹಗರಣದ ವಿಚಾರದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಬೇಕು ಎಂಬ ಬಿಜೆಪಿ ನಾಯಕರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಅಜಯ್ ಧರಂಸಿಂಗ್, ಬಿಜೆಪಿ ನಾಯಕರ ಬಳಿ ಯಾವುದೇ ದಾಖಲೆಗಳಿಲ್ಲ ಎಂದು ಹೇಳಿದರು. ಬಿಜೆಪಿ ನಾಯಕರು ಕಳೆದ ಒಂದು ತಿಂಗಳು, 15 ದಿನಗಳಿಂದ ಈ ಕುರಿತು ಹೇಳಿಕೆಗಳನ್ನು ನೀಡುತ್ತಿದ್ದಾರೆ.

ಆದರೆ ಇದುವರೆಗೆ ಯಾವುದೇ ದಾಖಲೆಗಳನ್ನು ಬಹಿರಂಗಪಡಿಸಿಲ್ಲ. ಪ್ರಿಯಾಂಕ್ ಖರ್ಗೆ ಅವರು ತಮ್ಮ ನಿಲುವಿನ ಬಗ್ಗೆ ಸ್ಪಷ್ಟನೆಯನ್ನೂ ನೀಡಿದ್ದಾರೆ. ಕೇವಲ ಪ್ರಚಾರಕ್ಕಾಗಿ ಆರೋಪ ಮಾಡಲಾಗುತ್ತಿದೆ ಎಂದು ಹೇಳಿದರು.

ಹಿಂದೆ ಕುಮಾರಸ್ವಾಮಿ ಅವರೂ ತಮ್ಮಬಳಿಸಿಡಿಹಾಗೂಪೆನ್‌ಡ್ರೈವ್ ಇದೆ ಎಂದು ಹೇಳಿದ್ದರು. ಆದ–ರೆ ಯಾವುದೇ ಸಿಡಿ ಅಥವಾ ಪೆನ್‌ಡ್ರೈವ್ ಹೊರಬರಲಿಲ್ಲ. ಈಗ ಆರೋಪ ಮಾಡುತ್ತಿರುವವರೇ "ಹಿಟ್ ವಿಕೆಟ್" ಆಗುತ್ತಿದ್ದಾರೆ ಎಂದು ಹೇಳಿದರು.

ಈ ವೇಳೆ ಮಾಜಿ ಸಚಿವ ಎನ್. ಎಸ್.ಬೋಸರಾಜು, ವಿಧಾನ ಪರಿಷತ್ ಎ ವಸಂತ ಕುಮಾರ, ಕಾಂಗ್ರೆಸ್‌ಮುಖಂಡಮುಹಮ್ಮದ್ ಶಾಲಂ ಮತ್ತಿತರರು ಇದ್ದರು.

ವಿಶ್ವಕರ್ಮ ಸಮುದಾಯ ಕಲೆ, ಕಾಯಕಕ್ಕೆ ಹೆಸರುವಾಸಿ



ದೇವರ ಹಿಪ್ಪರಗಿ: ವಿಶ್ವಸೃಷ್ಟಿಯ ವಿಶ್ವಕರ್ಮರು ಪರಬ್ರಹ್ಮ ಸ್ವರೂಪಿಯಾಗಿ ಎಲ್ಲರಿಗೂ ಮಾರ್ಗದರ್ಶನ ನೀಡಲಿ ಎಂದು ಶರಣ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ಅಧ್ಯಕ್ಷ ಎಸ್.ಎನ್. ಬಸವರಡ್ಡಿ ಹೇಳಿದರು.

ಪಟ್ಟಣದತಹಶೀಲ್ದಾರ್‌ಕಚೇರಿಯಲ್ಲಿಗುರುವಾರ ನಡೆದ ವಿಶ್ವಕರ್ಮ ಜಯಂತ್ಯೋತ್ಸವದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ವಿಶ್ವಕರ್ಮ ಸಮುದಾಯ ಕಲೆ ಮತ್ತು ಕಾಯಕಕ್ಕೆ ಹೆಸರಾಗಿದ್ದು, ಸಮಾಜದ ಅವಿಭಾಜ್ಯ ಅಂಗವಾಗಿದೆ. ಸಮುದಾಯದ ಪ್ರತಿಯೊಬ್ಬರೂ ಕಲೆಯ ಸೂಕ್ಷ್ಮತೆಯನ್ನು ಮೈಗೂಡಿಸಿಕೊಂಡು ಸಮಾಜಕ್ಕೆ ತಮ್ಮದೇ ಕೊಡುಗೆ ನೀಡುವ ಮೂಲಕ ಪರಂಪರೆಯನ್ನು ಉಳಿಸಿ ಬೆಳೆಸುತ್ತಿದ್ದಾರೆ ಎಂದರು.

ತಹಶೀಲ್ದಾರ್ ನಿಂಗಣ್ಣ ಬಿರಾದಾರ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದ ಆರಂಭದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಸಮುದಾಯದವರು ಪೂಜೆ ಸಲ್ಲಿಸಿ ಮಂಗಳಾರತಿ ನೆರವೇರಿಸಿದರು. ಬಳಿಕ ಪ್ರಸಾದ ವಿತರಿಸಲಾಯಿತು.

ಗ್ರೇಡ್?2 ತಹಶೀಲ್ದಾರ್ ಎಂ.ಜಿ. ಬಿರಾದಾರ, ಶಿರಸ್ತೇದಾರ್ ಸುರೇಶ ಮ್ಯಾಗೇರಿ, ಮೂರುಜಾವದಮಠದ ವಿಶ್ವನಾಥ ಸ್ವಾಮೀಜಿ, ನಾಗಯ್ಯ ಮೂರುಜಾವದಮಠ, ಮೋನಯ್ಯ ಪಂಚಾಳಮಠ, ವಿಶ್ವಕರ್ಮ ಸಂಘದ ಕಾರ್ಯದರ್ಶಿ ಸುರೇಶ ಬಡಿಗೇರ, ಮಹಾರುದ್ರ ಕಕ್ಕಳಮೇಲಿ, ಮಹೇಶ ದೊಡಮನಿ, ರಾಜು ಮಿರಗಿ, ಪ್ರಶಾಂತ ದೊಡಮನಿ, ಪ್ರಶಾಂತ ಬಡಿಗೇರ, ಸಿಬ್ಬಂದಿ ಶಿಲ್ಪಾ ಶಿಂಪಿ, ರಾಜು ಕಂಠಿ, ಸಂತೋಷ ತಳವಾರ ಹಾಗೂ ಸುರೇಶ ಮಣೂರ ಇದ್ದರು.

ಬರ ಘೋಷಣೆಗೆ ಆಗ್ರಹಿಸಿ ನಡೆಸಲು ಮುಂದಾಗಿದ್ದ ಕೆಕೆ ವಿಮೋಚನಾ ದಿನದ ಪ್ರತಿಭಟನೆ ಮುಂದೂಡಿಕೆ



ಯಾದಗಿರಿ: ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯೆಂದು ಘೋಷಿಸುವಂತೆ ಒತ್ತಾಯಿಸಿ ಸೆ.17ರಂದು ಕಲ್ಯಾಣ ಕರ್ನಾಟಕ ವಿಮೋಚನಾ ದಿನದಂದು ಪ್ರತ್ಯೇಕ ಧ್ವಜ ಹಾರಿಸಿ ಪ್ರತಿಭಟನೆ ನಡೆಸಲು ಮುಂದಾಗಿದ್ದ ಸರ್ವ ಸಂಘಟನೆಗಳ ಹೋರಾಟ ಸಮಿತಿಯ ಹೋರಾಟವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ.

ಬುಧವಾರ ಸಂಜೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಅವರು ಸಮಿತಿ ಪದಾಧಿಕಾರಿಗಳೊಂದಿಗೆ ತಮ್ಮ ಕಚೇರಿಯಲ್ಲಿ ಸಭೆ ನಡೆಸಿದರು. ಕೆಕೆ ವಿಮೋಚನಾ ದಿನದ ಕಾರ್ಯಕ್ರಮಕ್ಕೆ ಆಗಮಿಸಲಿರುವ ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಅವರನ್ನು ಸಮಿತಿ ಪದಾಧಿಕಾರಿಗಳಿಗೆ ಭೇಟಿ ಮಾಡಿಸಿ, ಬರ ಘೋಷಣೆ ಸೇರಿದಂತೆ ವಿವಿಧ ಬೇಡಿಕೆಗಳ ಕುರಿತು ಚರ್ಚಿಸಲು ಅವಕಾಶ ಕಲ್ಪಿಸುವುದಾಗಿ ಭರವಸೆ ನೀಡಿದರು.

ಈ ಹಿನ್ನೆಲೆಯಲ್ಲಿ ಗುರುವಾರ ನಿಗದಿಯಾಗಿದ್ದ ಪ್ರತಿಭಟನೆಯನ್ನು ಮುಂದೂಡಲಾಗಿದೆ ಎಂದು ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಜಲ್ಲಪ್ಪನೋರ್ ತಿಳಿಸಿದ್ದಾರೆ.

ಕಳೆದ ಹತ್ತು ದಿನಗಳ ಹಿಂದೆ ಜಿಲ್ಲೆಯನ್ನು ಬರಪೀಡಿತವೆಂದು ಘೋಷಿಸುವಂತೆ ಆಗ್ರಹಿಸಿ ಸರ್ವ ಸಂಘಟನೆಗಳ ಸಮಿತಿ ವತಿಯಿಂದ ಯಾದಗಿರಿ ಬಂದ್ ನಡೆಸಿ ಪ್ರತಿಭಟನೆ ಮಾಡಲಾಗಿತ್ತು. ಬಳಿಕ ಜಿಲ್ಲೆಗೆ ಆಗಮಿಸಿದ್ದ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಸಲ್ಲಿಸಿ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಲಾಗಿತ್ತು. ಸೆ.16ರೊಳಗೆ ಜಿಲ್ಲೆಯನ್ನು ಬರಪೀಡಿತವೆಂದು ಘೋಷಿಸದಿದ್ದರೆ ಸೆ.17ರಂದು ಪ್ರತ್ಯೇಕ ಧ್ವಜ ಹಾರಿಸಿ ಹೋರಾಟ ನಡೆಸುವುದಾಗಿ ಸಮಿತಿ ಎಚ್ಚರಿಕೆ ನೀಡಿತ್ತು. ಆದರೆ, ಸೆ.16ರ ಸಂಜೆವರೆಗೂ ಸರ್ಕಾರದಿಂದ ಯಾವುದೇ ಸ್ಪಷ್ಟ ಮಾಹಿತಿ ಲಭ್ಯವಾಗದ ಹಿನ್ನೆಲೆಯಲ್ಲಿ ಹೋರಾಟಕ್ಕೆ ಸಜ್ಜಾಗಿತ್ತು.

ಈ ವಿಷಯ ತಿಳಿದ ಎಸ್‌ಪಿ ಪೃಥ್ವಿಕ್ ಶಂಕರ್ ಅವರು ಸಮಿತಿ ಪದಾಧಿಕಾರಿಗಳೊಂದಿಗೆ ಮಾತುಕತೆ ನಡೆಸಿ ಹೋರಾಟ ಕೈಬಿಡುವಂತೆ ಮನವಿ ಮಾಡಿದರು. ಆರಂಭದಲ್ಲಿ ಬೇಡಿ–ಕೆ ಈಡೇರದ ಹಿನ್ನೆಲೆಯಲ್ಲಿ ನಿಗದಿಯಂತೆ ಹೋರಾಟ ನಡೆಸುವುದಾಗಿ ಸಮಿತಿ ತಿಳಿಸಿತ್ತು.

ಬಳಿಕ ಜಿಲ್ಲಾ ಉಸ್ತುವಾರಿ ಸಚಿವರನ್ನು ಭೇಟಿ ಮಾಡಿ ಬೇಡಿಕೆಗಳ ಕುರಿತು ಚರ್ಚಿಸಲು ಅವಕಾಶ ಕಲ್ಪಿಸುವುದಾಗಿ ಎಸ್‌ಪಿ ಭರವಸೆ ನೀಡಿದ ಹಿನ್ನೆಲೆಯಲ್ಲಿ ಹೋರಾಟವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ ಎಂದು ಸಮಿತಿ ತಿಳಿಸಿದೆ.

ಸಭೆಯಲ್ಲಿ ಮಾರೆಪ್ಪ ನಾಯಕ, ಅಶೋಕ ಐಕೂರ, ಎಂ.ಡಿ. ತಾಜಾ, ಸೈದಪ್ಪ ಕೂಲುರಕರ್, ರಾಜಶೇಖರ ಎದುರುಮನಿ, ನಿಜಲಿಂಗಪ್ಪ ಪೂಜಾರಿ, ಸಿದ್ದು ಪಾಟೀಲ್ ತಂಗಡಗಿ, ಶಿವರಾಜ ದಾಸನಕೇರಿ, ರುದ್ರಾಂಭೀಕ ಪಾಟೀಲ್, ಅಜಯ ಮಾಸನ್, ಭೀಮು ಪೂಜಾರಿ, ವೀರೇಶ ಸಜ್ಜನ, ಬಸ್ಸುಗೌಡ ಚಟ್ಟನಳ್ಳಿ, ಶಂಕರ ಸೋನಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಒಗ್ಗಟ್ಟಿನಿಂದ ಶ್ರಮಿಸಿದರೆ ಸಮಾಜದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ : ಶಾಸಕ ಚೆನ್ನಾರೆಡ್ಡಿ ಪಾಟೀಲ್



ಯಾದಗಿರಿ: ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಪ್ರತಿಯೊಬ್ಬರೂ ಒಗ್ಗಟ್ಟಿನಿಂದ ಶ್ರಮಿಸುವುದು ಅತ್ಯಗತ್ಯ ಎಂದು ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದರು.

ನಗರದ ಸರ್ಕಾರಿ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ ಸಮಿತಿ ಹಾಗೂ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಕರ್ಮ ಸಮಾಜವು ಬುದ್ಧಿವಂತಿಕೆ, ದೂರದೃಷ್ಟಿ ಮತ್ತು ಅದ್ಭುತ ತಾಂತ್ರಿಕ ಕೌಶಲ್ಯ ಹೊಂದಿರುವ ಸಮುದಾಯವಾಗಿದೆ.

ಶೈಕ್ಷಣಿಕ, ಆರ್ಥಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಮತ್ತಷ್ಟು ಸಬಲವಾಗಿ ಬೆಳೆಯಬೇಕು. ಸಂಕಷ್ಟಗಳನ್ನು ಮೆಟ್ಟಿ ನಿಂತು ಒಗ್ಗಟ್ಟಿನಿಂದ ಬದುಕಲು ಮಹನೀಯರ ಜೀವನ ಚರಿತ್ರೆಗಳು ಪ್ರೇರಣೆಯಾಗುತ್ತವೆ ಎಂದು ಹೇಳಿದರು.

ಮುಖ್ಯ ಉಪನ್ಯಾಸಕರಾಗಿ ಮಾತನಾಡಿದ ಗುರಪ್ಪ ಎಂ. ಆಚಾರ್ಯ, ವಿಶ್ವಕರ್ಮ ಸಮುದಾಯ ಆರ್ಥಿಕವಾಗಿ ಹಿಂದುಳಿದಿದ್ದರೂ ಕಲೆ ಮತ್ತು ಸಂಸ್ಕೃತಿಯಲ್ಲಿ ಶ್ರೀಮಂತವಾಗಿದೆ. ಪಂಚವೃತ್ತಿಗಳನ್ನು ನಿರ್ವಹಿಸುವ ಕುಶಲಕರ್ಮಿಗಳನ್ನು ಗೌರವಿಸಿದಾಗ ಮಾತ್ರ ವಿಶ್ವಕರ್ಮ ಜಯಂತಿಗೆ ನಿಜವಾದ ಅರ್ಥ ಸಿಗುತ್ತದೆ.

ಆಧುನಿಕ ತಂತ್ರಜ್ಞಾನದ ಭರದಲ್ಲಿ ಸಾಂಪ್ರದಾಯಿಕ ಕಲೆಗಳು ನಶಿಸುತ್ತಿರುವುದರಿಂದ ಅವುಗಳನ್ನು ಉಳಿಸಿ ಬೆಳೆಸುವ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶ್ವಕರ್ಮ ಏಕದಂಡಗಿ ಮಠದ ಆನೆಗುಂದಿ ಸಂಸ್ಥಾನದ ಸರಸ್ವತಿ ಪೀಠಾಧೀಶರಾದ ಶ್ರೀ ರವೀಂದ್ರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್, ಏಕದಂಡಗಿ ಮಠದ ಸ್ವಾಮಿಗಳಾದ ಕೃಷ್ಣ ಮೂರ್ತಿ, ವಿಶ್ವಕರ್ಮ ಸಮಾಜದ ಜಿಲ್ಲಾಧ್ಯಕ್ಷ ಮಹೇಶ ವಿಶ್ವಕರ್ಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ, ಶಿವಣ್ಣ ಊನೂರ್, ದೇವಿಂದ್ರಪ್ಪ ಎಲ್ ವಡಗೇರಿ, ಹಣಮಂತ್ರಾಯ ಉಳ್ಳೆಸುಗೂರು, ಬನ್ನಪ್ಪ ಕಾಳೆಬೆಳಗುಂದಿ, ಮಲ್ಲು ವಿಶ್ವಕರ್ಮ ಕಂಬಾರ್ ಸೇರಿದಂತೆ ಸಮಾಜದ ಪ್ರಮುಖ ಮುಖಂಡರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಭ್ರಷ್ಟಾಚಾರದಿಂದ ಎಂಜಿನಿಯರ್‌ಗಳಿಗೆ ಕೆಟ್ಟ ಹೆಸರು, ವ್ಯವಸ್ಥೆಯ ವೈಫಲ್ಯ ಕಾರಣ



ಯಾದಗಿರಿ: 'ಪ್ರಸ್ತುತ ದಿನಗಳಲ್ಲಿ ಎಂಜಿನಿಯರ್‌ಗಳಿಗೆ ಕೆಟ್ಟ ಹೆಸರು ಬರಲು ಭ್ರಷ್ಟಾಚಾರ ಕಾರಣವಾಗಿದೆ. ಇದಕ್ಕೆ ವ್ಯವಸ್ಥೆಯಲ್ಲಿನ ವೈಫಲ್ಯವೇ ಕಾರಣವಾಗಿದೆ ಹೊರತು ಎಂಜಿನಿಯರ್‌ಗಳಲ್ಲ' ಎಂದು ಕನ್ಸಲ್ಟಿಂಗ್ ಸಿವಿಲ್ ಎಂಜಿನಿಯರ್ ಸಂಘಟನೆಯ ಜಿಲ್ಲಾ ಅಧ್ಯಕ್ಷ ಭೀಮಣ್ಣಗೌಡ ಕ್ಯಾತನಾಳ ಕಳವಳ ವ್ಯಕ್ತಪಡಿಸಿದರು.

ಇಲ್ಲಿನ ಪದವಿ ಮಹಾವಿದ್ಯಾಲಯದ ವಿಶ್ವನಾಥರೆಡ್ಡಿ ಮುದ್ನಾಳ ಸಭಾಂಗಣದಲ್ಲಿ ಮಂಗಳವಾರ ಕನ್ಸಲ್ಟಿಂಗ್ ಸಿವಿಲ್ ಎಂಜಿನಿಯರ್ ಸಂಘಟನೆ ವತಿಯಿಂದ ಸರ್ ಎಂ.ವಿಶ್ವೇಶ್ವರಯ್ಯ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಎಂಜಿನಿಯರ್‌ಗಳ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜನರ ಕನಸುಗಳಿಗೆ ರೆಕ್ಕೆ ಕಟ್ಟುವವರು ನಾವು. ಎಂಜಿನಿಯರ್‌ಗಳು ಜನರ ಮನದ ಅಮೂರ್ತ ಭಾವನೆಗಳಿಗೆ ಮೂರ್ತ ಸ್ವರೂಪ ನೀಡುವ ಶಿಲ್ಪಿಗಳು. ಎಂಜಿನಿಯರ್‌ಗಳು ಯಾವುದೇ ಒತ್ತಡ–ಕ್ಕೆ ಒಳಗಾಗದೆ, ನಮ್ಮ ಪ್ರತಿಭೆಯನ್ನು ತೀಕ್ಷ್ಣವಾಗಿ ಬೆಳೆಸಿದರೆ ಸದೃಢ ರಾಷ್ಟ್ರ ಕಟ್ಟಲು ಸಾಧ್ಯವಾಗುತ್ತದೆ' ಎಂದರು.

ದೊಡ್ಡ ದೊಡ್ಡ ಬಿಲ್ಡಿಂಗ್ ಕಟ್ಟಿಸುವವರು ಸ್ಥಳೀಯ ಎಂಜಿನಿಯರ್‌ಗಳಲ್ಲಿನ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಕೆಲಸ ಕೊಡುತ್ತಿಲ್ಲ. ಹೈದರಾಬಾದ್, ಬೆಂಗಳೂರು, ಪುಣೆಯಿಂದ ಎಂಜಿನಿಯರ್‌ಗಳನ್ನು ಕರಿಯಿಸುತ್ತಿದ್ದಾರೆ. ಹೊರಗಿನವರಿಗೆ ಲಕ್ಷಾಂತರ ರೂಪಾಯಿ ಕೊಡಲು ಸಿದ್ಧರಿದ್ದಾರೆ. ಅವರಿಗಿಂತ ಹತ್ತು ಪಟ್ಟು ಟ್ಯಾಲೆಂಟ್ ಇದ್ದು, ಸರಿಯಾಗಿ ಕೆಲಸ ಮಾಡುವ ಯಾದಗಿರಿಯ ಎಂಜಿನಿಯರ್‌ಗಳನ್ನು ಪರಿಗಣಿಸುತ್ತಿಲ್ಲ' ಎಂದು ಬೇಸರ ವ್ಯಕ್ತಪಡಿಸಿದರು.

ಯುವ ಎಂಜಿನಿಯರ್‌ಗಳು ನಿತ್ಯ ಬದಲಾಗುತ್ತಿರುವ, ಹೊರಬರುತ್ತಿರುವ ಹೊಸಬಗೆಯ ಆವಿಷ್ಕಾರಗಳನ್ನು ಅಧ್ಯಯನ ಮಾಡಿ, ಅದನ್ನು ವೃತ್ತಿಯಲ್ಲಿ ಅಳವಡಿಸಿಕೊಳ್ಳಬೇಕು. ನಿರಂತರವಾದ ಕಲಿಕೆ ಬೇರೆಯವರಿಗಿಂತ ನಮ್ಮನ್ನು ಶ್ರೇಷ್ಠರನ್ನಾಗಿ ಮಾಡುತ್ತದೆ' ಎಂದು ಹೇಳಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್. ಎಸ್.ಪಾಟೀಲ ಮಾತನಾಡಿ, 'ಮನೆಕಟ್ಟುವ ನಿರ್ಮಾತೃ ಮತ್ತು ಮನೆಯ ಮಾಲೀಕರ ಕನಸುಗಳನ್ನು ಪೂರ್ಣಗೊಳಿಸುವುದೇ ಎಂಜಿನಿಯರ್‌ಗಳು. ಒಬ್ಬ ಎಂಜಿನಿಯರ್ ತಪ್ಪು ಮಾಡಿದರೆ ಮನೆಯನ್ನು ಮರುನಿರ್ಮಾಣ ಮಾಡಬೇಕಾಗುತ್ತೆ ಇಲ್ಲವೇ ತಲೆಯೇ ಕಳೆದುಕೊಳ್ಳಬೇಕಾಗುತ್ತದೆ. ನಾನೂ ಸೇರಿದಂತೆ ಪ್ರತಿಯೊಬ್ಬರೂ ನಮ್ಮಲ್ಲಿನ ದೋಷವನ್ನು ಸರಿಪಡಿಸಿಕೊಳ್ಳಬೇಕಿದೆ' ಎಂದರು.

ಎಷ್ಟೋ ಜನರು ಮನೆಗಳನ್ನು ಕಟ್ಟುತ್ತಾರೆ. ಆದರೆ, ಬಹುತೇಕರ ಬಳಿ ಪ್ಲ್ಯಾನಿಂಗ್ ಇರುವುದಿಲ್ಲ, ಎಂಜಿನಿಯರ್‌ಗಳನ್ನೂ ಸಂಪರ್ಕಿಸುವುದಿಲ್ಲ. ಹೈದರಾಬಾದ್ ಮೂಲದ ಗೌಂಡಿಗಳ ಬೆನ್ನುಹತ್ತುತ್ತಿದ್ದಾರೆ. ಎಂಜಿನಿಯರ್‌ಗಳು ಮನೆ ಕಟ್ಟುವವರ ಹೃದಯವನ್ನು ತಲುಪಬೇಕು' ಎಂದು ಹೇಳಿದರು.

ಮಹಾವಿದ್ಯಾಲಯದ ಪ್ರಾಂಶುಪಾಲ ಸುಭಾಷ್ಚಂದ್ರ ಕೌಲಗಿ ಮಾತನಾಡಿ, 'ತಂತ್ರಜ್ಞಾನ ಬೆಳೆದಿರುವ ಕಾಲಘಟದಲ್ಲಿ ಸಾವಿರಾರು ಹೆಕ್ಟೇರ್ ಪ್ರದೇಶಕ್ಕೆ ನೀರುಣಿಸುವಂತಹ ಕನ್ನಂಬಾಡಿ ಕಟ್ಟೆಯನ್ನು ಕಟ್ಟಿ ಇಡೀ ವಿಶ್ವವೇ ಕರ್ನಾಟಕದತ್ತ ನೋಡುವಂತೆ ಮಾಡಿದ್ದ ಮಹಾನ್ ಸಾಧಕ ವಿಶ್ವೇಶ್ವರಯ್ಯ ಅವರು. ಅವರ ಹೆಸರು ಭೂಮಂಡಲ, ಚಂದ್ರ, ತಾರೆ ಇರುವವರೆಗೂ ಶಾಶ್ವತವಾಗಿ ಉಳಿಯಲಿದೆ' ಎಂದರು.

ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನಿಸಿ ವಿದ್ಯಾರ್ಥಿಗಳಿಗೆ ನೋಟ್‌ಬುಕ್, ಪೆನ್ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ 'ಯುಡಾ' ಅಧ್ಯಕ್ಷ ಬಾಬುರಾವ್ ಕಾಡ್ಲೂರ್, ಸಂಘಟನೆಯ ಕಾರ್ಯದರ್ಶಿ ಇರ್ಫಾನ್ ಬಾದಲ್, ಲಯನ್ಸ್ ಕ್ಲಬ್ ಅಧ್ಯಕ್ಷ ಸಿದ್ಧರಾಜ ರೆಡ್ಡಿ, ಪಿಆರ್‌ಇ ಯಾದಗಿರಿ ವಿಭಾಗದ ಎಂಜಿನಿಯರ್ ಗಿರೀಶ್ ಕುಮಾರ್ ಗುಡ್ಡ, ಅಲ್ಟ್ರಾಟೆಕ್ ಸಿಮೆಂಟ್ ಕಲಬುರಗಿ ಪ್ರದೇಶದ ಮಾರಾಟ ಮುಖ್ಯಸ್ಥ ಗಿರೀಶ ಸವಣುರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅತ್ಯಾಚಾರಿಗೆ 10 ವರ್ಷ ಜೈಲು, 56 ಸಾವಿರ ದಂಡ ವಿಧಿಸಿದ ನ್ಯಾಯಾಲಯ



ಸಿಂಧನೂರು: ಅತ್ಯಾಚಾಗೆ 10 ವರ್ಷ ಜೈಲು ಶಿಕ್ಷೆ ಹಾಗೂ 56 ಸಾವಿರ ದಂಡ ವಿಧಿಸಿ 3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಎ.ಸೋಮಶೇಖರ ಆದೇಶಿಸಿದ್ದಾರೆ.

ಪ್ರಕರಣ ಹಿನ್ನೆಲೆ: ತಾಲ್ಲೂಕಿನ ಹಟ್ಟಿ ಗ್ರಾಮದ ಶಂಕ್ರಪ್ಪ ಬಸಪ್ಪ ತಳವಾರ 2023ರ ಅಕ್ಟೋಬರ್ 28ರಂದು ರಾತ್ರಿ ಮದ್ಯಪಾನ ಮಾಡಿ ಮನೆಗೆ ಬಂದು ಬಾಗಿಲು ಬಡೆದು ಮನೆಯೊಳಗೆ ಅತಿಕ್ರಮವಾಗಿ ಪ್ರವೇಶಿಸಿ ಅತ್ಯಾಚಾರವೆಸಗಿ ಕೊಲೆ ಬೆದರಿಕೆ ಹಾಕಿದ್ದಾನೆ ಎಂದು ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣಯಲ್ಲಿ ದೂರು ದಾಖಲಾಗಿತ್ತು.

ಸಿಪಿಐ ವೀರಾರೆಡ್ಡಿ ಅವರು ತನಿಖೆ ಕೈಗೊಂಡು ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣ ಪತ್ರ ಸಲ್ಲಿಸಿದ್ದರು.

ಪ್ರಕರಣದ ವಾದ, ಪ್ರತಿವಾದ ಆಲಿಸಿದ ನ್ಯಾಯಾಧೀಶ ಎ.ಸೋಮಶೇಖರ ಅವರು ಸಾಕ್ಷ್ಯಾಧಾರಗಳನ್ನು ಪರಾಮರ್ಶಿಸಿ (ಸೆ.16) ಮಂಗಳವಾರ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ದಂಡ ವಿಧಿಸಿ ಹಾಗೂ ದಂಡದ ಮೊತ್ತದಲ್ಲಿ 50 ಸಾವಿರ ಬಾಧಿತಳಿಗೆ ನೀಡಬೇಕು ಎಂದು ತೀರ್ಪು ನೀಡಿದ್ದಾರೆ.

ಸರ್ಕಾರಿ ಅಭಿಯೋಜಕ ಮಂಜುನಾಥ ಭೇರಿಗಿ ಸರ್ಕಾರದ ಪರವಾಗಿ ವಾದ ಮಂಡಿಸಿದ್ದರು.

PUBLIC FAST KANNADA DAILY NEWS PAPER

ದಿನಾಂಕ : 26–09–2026

ಕೆಪಿಎಸ್‌ಸಿ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಲಿ: ಬೊಮ್ಮಾಯಿ



ಗದಗ: 'ಕರ್ನಾಟಕ ಲೋಕಸೇವಾ ಆಯೋಗದಲ್ಲಿ (ಕೆಪಿಎಸ್‌ಸಿ) ನಡೆದಿರುವ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು' ಎಂದು ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದರು.

ನಗರದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದರು.

ದೇಶದಲ್ಲಿ ಏನೇ ಆದರೂ ರಾಹುಲ್ ಗಾಂಧಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜೊತೆಗೆ ಜೋಡಣೆ ಮಾಡುತ್ತಾರೆ. ದೇಶದ ಆರ್ಥಿಕತೆ ಶೂನ್ಯವೆಂದು ಟ್ರಂಪ್ ಹೇಳಿದಾಗ ಕಾಂಗ್ರೆಸ್‌ನವರು ಖುಷಿಪಟ್ಟಿದ್ದರು. ಇದೀಗ ಭಾರತವು ಅಮೆರಿಕ, ರಷ್ಯಾವನ್ನು ಮೀರಿಸಿ ಆರ್ಥಿಕವಾಗಿ ಅಗ್ರಸ್ಥಾನದಲ್ಲಿದೆ. ಜನರ ದಾರಿ ತಪ್ಪಿಸುವ ಕೆಲಸದಲ್ಲೂ ರಾಹುಲ್ ವಿಫಲರಾಗಿದ್ದಾರೆ' ಎಂದು ತಿರುಗೇಟು ನೀಡಿದರು.

ಕೇಂದ್ರದಲ್ಲಿ ಬಹುಮತ ಕಳೆದುಕೊಂಡಾಗ ಇಂದಿರಾ ಗಾಂಧಿ, ಕಮ್ಯುನಿಸ್ಟ್ ಪಕ್ಷದವರ ನೆರವು ಪಡೆದು, ಅಲ್ಪಸಂಖ್ಯಾತ ಸರ್ಕಾರ ನಡೆಸಿದರು. ಅವರ ಆಡಳಿತ ಎಡವೂ ಅಲ್ಲ, ಬಲವೂ ಅಲ್ಲ, ಜನಪಂಥೀಯವೂ ಅಲ್ಲ ಎಂಬಂತಿತ್ತು. ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದ ಖ್ಯಾತಿ ರಾಹುಲ್ ಅಜ್ಜಿಯದ್ದು. ಅವರಿಂದ ನೈತಿಕತೆಯ ಪಾಠ ಕಲಿಯುವ ಅಗತ್ಯವಿಲ್ಲ' ಎಂದರು.

ಪ್ರಧಾನಿ ಮೋದಿ ಅವರ ವಿಚಾರ, ಕಾರ್ಯಕ್ರಮ ಹಾಗೂ ಅನುಷ್ಠಾನ ಶಕ್ತಿಯಿಂದ ದೇಶಕ್ಕೆ ಗೌರವ ದೊ–ರೆತಿದೆ. ಆರ್ಥಿಕವಾಗಿ ವಿಶ್ವದಲ್ಲೇ ಮೂರನೆ ಸ್ಥಾನದಲ್ಲಿದೆ' ಎಂದು ಹೇಳಿದರು.

ಇ–ಕೆವೈಸಿ, ಎ ಖಾತೆ, ಎ ಖಾತೆಯಿಂದ ಬಿ ಖಾತೆ ಬದಲಾವಣೆ ವ್ಯವಸ್ಥೆಯನ್ನು ಕಾಂಗ್ರೆಸ್ ಸರ್ಕಾರ ಸೂಕ್ತ ತಯಾರಿ ಇಲ್ಲದೆ ಜಾರಿಗೊಳಿಸಿದೆ. ಸರ್ವರ್ ಸಮಸ್ಯೆಯಿಂದ ಪಡಿತರ ಚೀಟಿಯನ್ನೂ ಕೊಡುತ್ತಿಲ್ಲ. ಇದ–ರಿಂದ ಜನರ ಪರದಾಡುತ್ತಿದ್ದು, ಮುಂದಿನ ದಿನಗಳಲ್ಲಿ ತಕ್ಕಪಾಠ ಕಲಿಸುತ್ತಾರೆ' ಎಂದರು.

ಕಿರವಾಡಿ: ಆಯುಷ್ಮಾನ್ ಆರೋಗ್ಯ ಕೇಂದ್ರ ಕಟ್ಟಡ ಉದ್ಘಾಟನೆ



ಕಿರವಾಡಿ: ಆರೋಗ್ಯವೇ ಮಾನವನ ಜೀವನದ ಅತಿ ದೊಡ್ಡ ಸಂಪತ್ತು. ಗ್ರಾಮೀಣ ಭಾಗದ ಜನರು ಉತ್ತಮ ಆರೋಗ್ಯ ಸೇವೆ ಪಡೆಯಲು ದೂರದ ಪ್ರದೇಶಗಳಿಗೆ ತೆರಳಬೇಕಾದ ಪರಿಸ್ಥಿತಿಯನ್ನು ಕಡಿಮೆ ಮಾಡುವ ಉದ್ದೇಶದಿಂದ ಕೇಂದ್ರ ಮತ್ತು ರಾಜ್ಯಸರ್ಕಾರಗಳುಆಯುಷ್ಮಾನ್ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಮುಂದಾಗಿದೆ ಎಂದು ಸಂಸದರಾದ ಬಸವರಾಜ ಬೊಮ್ಮಾಯಿ ಹೇಳಿದರು.

ಸಮೀಪದ ಕಿರವಾಡಿ ಗ್ರಾಮದಲ್ಲಿ ಬುಧವಾರ ನೂತನವಾಗಿ ನಿರ್ಮಿಸಿರುವ ಆಯುಷ್ಮಾನ್ ಆರೋಗ್ಯ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯದಲ್ಲಿ ಎರಡು ಕೋಟಿ ಜನರು ಆಯುಷ್ಮಾನ್ ಕಾರ್ಡ್ ಪಡೆದಿದ್ದು, ಅದರಲ್ಲಿ 90 ಲಕ್ಷ ಜನ ಇದರ ಲಾಭ ಪಡೆದು–ಕೊಂಡಿದ್ದಾರೆ. ನಾನು ಮುಖ್ಯಮಂತ್ರಿ ಆದ ಸಂದರ್ಭದಲ್ಲಿ ಕಿಡ್ನಿ ಫೇಲಾದವರಿಗೆ ವಾರಕ್ಕೆ ಒಂದು ಅಥವಾ ಎರಡು ಬಾರಿ ಡಯಾಲಿಸಿಸ್ ಮಾಡಿಸಬೇಕಾಗುತ್ತದೆ.

ಹಿಂದೆ ಒಂದು ದಿನಕ್ಕೆ 30 ಸಾವಿರ ಜನಕ್ಕೆ ಮಾತ್ರ ಡಯಾಲಿಸಿಸ್ ಮಾಡುತ್ತಿದ್ದರು.. ಆದರೆ ನಾನು ಅದನ್ನು 60 ಸಾವಿರಕ್ಕೆ ಏರಿಸಿದೆ. ತಿಳವಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮಾಡಬೇಕು ಎಂಬುದು ನಿಮ್ಮೆಲ್ಲರ ಬೇಡಿಕೆಯಾಗಿದೆ ನಾನು ಮುಖ್ಯಮಂತ್ರಿ ಹಾಗೂ ಆರೋಗ್ಯ ಸಚಿವರ ಹತ್ತಿರ ಮಾತನಾಡಿ ಸಮುದಾಯ ಆರೋಗ್ಯ ಕೇಂದ್ರವನ್ನಾಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಶಾಸಕ ಶ್ರೀನಿವಾಸ ಮಾನೆ ಮಾತನಾಡಿ ಈ ಆರೋಗ್ಯ ಕೇಂದ್ರದ ಮೂಲಕ ಪ್ರಾಥಮಿಕ ಆರೋಗ್ಯ ತಪಾಸಣೆ, ಸಾಂಕ್ರಾಮಿಕ ಹಾಗೂ ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಹಾಗೂ ಅಗತ್ಯ ಔಷಧಿಗಳ ಲಭ್ಯತೆ ಸೇರಿದಂತೆ ಹಲವು ಸೇವೆಗಳು ಜನರ ಮನೆ ಬಾಗಿಲಿಗೆ ತಲುಪಲಿವೆ. ಈಗಾಗಲೇ ತಿಳವಳ್ಳಿಯಲ್ಲಿ ಹೊಸ ಪೊಲೀಸ್ ಠಾಣೆ ಜಾರಿಯಾಗಿದ್ದು, ಠಾಣೆಯ ಕಟ್ಟಡದ ಕಾಮಗಾರಿ ಆರಂಭವಾಗುತ್ತಿದೆ ಎಂದರು. ಹಾನಗಲ್ಲ ತಾಲ್ಲೂಕನ್ನು ಅತೀ ಶೀಘ್ರದಲ್ಲಿ ಬರಗಾಲ ಘೋಷಣೆ ಹಂತದಲ್ಲಿ ಇದ್ದು ಆದಷ್ಟು ಬೇಗ ಬರಗಾಲ ಪೀಡಿತ ತಾಲ್ಲೂಕಗಳ ಪಟ್ಟಿಯಲ್ಲಿ ಸೇರಲಿದೆ ಎಂದರು.

ಮಾಜಿ ಶಾಸಕರಾದ ಶಿವರಾಜ ಸಜ್ಜನರ, ಪುಟ್ಟಪ್ಪ ನರೇಗಲ್ಲ, ರಾಜಶೇಖರ ಕಟ್ಟೆಗೌಡ್ರ, ಟಾಕನಗೌಡ ಪಾಟೀಲ್, ರಾಘವೇಂದ್ರ ತಹಶೀಲ್ದಾರ, ವೀರಪ್ಪ ಬೈಲವಾಳ, ಬಸವರಾಜ ಚವ್ಹಾಣ, ಬಸವರಾಜ ಹಾದಿಮನಿ, ಸಿದ್ದಲಿಂಗಪ್ಪ ಕಮಡಳ್ಳಿ, ಕಲ್ಯಾಣಕುಮಾರಶೆಟ್ಟರ,ಸುನೀಲಪಾಟೀಲ, ಶಿವಲಿಂಗಪ್ಪ ತಲ್ಲೂರ, ಮಂಜುನಾಥ ಗುರಣ್ಣನವರ, ಕೊಟ್ರಗೌಡ ಪಾಟೀಲ ಹಾಗೂ ಮುಖಂಡರು ಹಾಜರಿದ್ದರು.

ಕವಿಯಾಗಲು ನಿರಂತರ ಓದು, ಅಭ್ಯಾಸ ಮುಖ್ಯ: ಸಾಹಿತಿ ಲಲಿತಕ್ಕ ಕೆರಿಮನಿ



ಲಕ್ಷ್ಮೇಶ್ವರ: 'ಕವನ ಬರೆಯುವುದು ಸುಲಭದ ಮಾತಲ್ಲ. ಅದಕ್ಕೆ ನಿರಂತರ ಓದು, ಅಭ್ಯಾಸ ಮುಖ್ಯ. ಕವಿಯಾದವನು ಬೇರೆಯವರು ಬರೆದ ಕವನಗಳನ್ನು ಓದಬೇಕು' ಎಂದು ಸಾಹಿತಿ ಲಲಿತಕ್ಕ ಕೆರಿಮನಿ ಹೇಳಿದರು.

ಇಲ್ಲಿನ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ತಾಲ್ಲೂಕು ಬರಹಗಾರರ ಬಳಗದವರು ಗುರುವಾರ ಹಮ್ಮಿಕೊಂಡಿದ್ದ ಗಣೇಶ ನಮನ ಕವಿಗೋಷ್ಠಿ ಉದ್ಘಾಟಿಸಿ ಅವರು ಮಾತನಾಡಿದರು.

ಕವಿಗಳು ಸಾಮಾನ್ಯ ಜನರಿಗೆ ಅರ್ಥ ಆಗುವಂತೆ ಕವನಗಳನ್ನು ಬರೆಯಬೇಕು.

ಸಮಾಜದಲ್ಲಿ ನಿತ್ಯ ನಡೆಯುವ ಘಟನೆಗಳನ್ನೇ ಆಧಾರವಾಗಿ ಇಟ್ಟುಕೊಂಡು ಬರೆದ ಸಾಹಿತ್ಯವಾಗಲಿ, ಕಾವ್ಯವಾಗಲಿ ಹೆಚ್ಚು ಜನರನ್ನು ತಲುಪುತ್ತದೆ' ಎಂದು ತಿಳಿಸಿದರು

ನಿವೃತ್ತ ಶಿಕ್ಷಕ ಎಸ್.ಎಫ್. ಆದಿ ಮಾತನಾಡಿ, 'ಮನದಲ್ಲಿ ಮೂಡುವ ಕಲ್ಪನೆಗಳೇ ಕವನಗಳಾಗಿ ಹೊರ ಬರುತ್ತವೆ. ಕಾರಣ ಕವಿ ಆದವನು ನಿತ್ಯವೂ ಜಗತ್ತನ್ನು ಚಿಕಿತ್ಸಕ ಬುದ್ಧಿಯಿಂದ ನೋಡುತ್ತಿರಬೇಕು' ಎಂದು ಹೇಳಿದರು.

ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ ಮತ್ತು ಅಧ್ಯಕ್ಷತೆ ವಹಿಸಿದ್ದ ಜೆ.ಎಸ್. ರಾಮಶೆಟ್ರ ಮಾತನಾಡಿದರು. ಮಕ್ಕಳ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಘಟಕದ ಅಧ್ಯಕ್ಷ ನಾಗರಾಜ ಹಣಗಿ, ಅಶೋಕ ಸೊರಟೂರ, ಎಲ್.ಎಸ್. ಅರಳಹಳ್ಳಿ, ಸೋಮಣ್ಣ ಯತ್ತಿನಹಳ್ಳಿ, ಮಹಾನಂದ ಕೊಣ್ಣೂರ, ಜಯಶ್ರೀ ಬಾಳಿಹಳ್ಳಿಮಠ, ಕವಿತಾ ಅರಳಹಳ್ಳಿ ಗಣಪತಿ ಕುರಿತು ಬರೆದ ಕವನಗಳನ್ನು ವಾಚನ ಮಾಡಿದರು.

ಬಸವರಾಜ ಯರಗುಪ್ಪಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಚ್.ಡಿ. ನಿಂಗರೆಡ್ಡಿ ನಿರೂಪಿಸಿ ವಂದಿಸಿದರು.

ಮುಂಡರಗಿ ಆಸ್ಪತ್ರೆಯಲ್ಲಿ ವೈದ್ಯರ ಸಮಯಪ್ರಜ್ಞೆಯಿಂದ ಬಾಣಂತಿ ಪಾರು



ಮುಂಡರಗಿ: ಅಧಿಕ ರಕ್ತಸ್ರಾವದಿಂದ ಪ್ರಾಣಾಪಾಯದಲ್ಲಿದ್ದ ಬಾಣಂತಿಗೆ ಸಾರ್ವಜನಿಕ ಆಸ್ಪತ್ರೆಯಲ್ಲಿ ಸುಮಾರು ನಾಲ್ಕು ತಾಸು ಶಸ್ತ್ರ ಚಿಕಿತ್ಸೆ ಮಾಡಿದ ವೈದ್ಯರು ಬಾಣಂತಿ ಹಾಗೂ ಹಸುಗೂಸನ್ನು ಪ್ರಾಣಾಪಾಯದಿಂದ ಪಾರು ಮಾಡಿದ್ದಾರೆ.

ತಾಲ್ಲೂಕಿನ ಬ್ಯಾಲವಾಡಿಗೆ ಗ್ರಾಮದ ಷಾಹೀನ್ ನದಾಫ್ ಅವರು ಹೆರಿಗೆಗಾಗಿ ಆಸ್ಪತ್ರೆಗೆ ದಾಖಲಾಗಿದ್ದರು. ಆಸ್ಪತ್ರೆಯ ಹೆರಿಗೆ ವಿಭಾಗದ ಡಾ.ರಕ್ಷಿತಾ ಪೂಜಾರ ಅವರು ಶಸ್ತ್ರಚಿಕಿತ್ಸೆಯ ಮೂಲಕ ಹೆರಿಗೆ ಮಾಡಿಸಿದ್ದರು. ವಿಪರೀತ ರಕ್ತಸ್ರಾವ ಆಗಿದ್ದ–ರಿಂದ ಪರಿಸ್ಥಿತಿ ಚಿಂತಾಜನಕವಾಗಿತ್ತು. ತಕ್ಷಣಕ್ಕೆ ಜಿಲ್ಲಾಸ್ಪತ್ರೆಗೆ ರವಾನಿಸಲು ಆಗದ ಸ್ಥಿತಿ ಇತ್ತು.

ಡಾ. ರಕ್ಷಿತಾ ಪೂಜಾರ ಅವರು ಆಸ್ಪತ್ರೆಯ ವಿವಿಧ ವಿಭಾಗಗಳ ಹಿರಿಯ, ಕಿರಿಯ ವೈದ್ಯರ ನೆರವಿನೊಂದಿಗೆ ಶಸ್ತ್ರಚಿಕಿತ್ಸೆ ನಡೆಸಿದರು. ಸಂಪೂರ್ಣವಾಗಿ ಚೇತರಿಸಿಕೊಂಡ ಬಾಣಂತಿ ಹಾಗೂ ಹಸುಗೂಸನ್ನು ವೈದ್ಯರು ಆಸ್ಪತ್ರೆಯಿಂದ ಬಿಡುಗಡೆಗೊಳಿಸಿದ್ದಾರೆ.

ಶಸ್ತ್ರಚಿಕಿತ್ಸೆ ಸಂದರ್ಭದಲ್ಲಿ ಡಾ. ಲಕ್ಷ್ಮಣ ಪೂಜಾರ ಅವರು ತಮ್ಮದೇ ಕಾರನ್ನು ಗದುಗಿಗೆ ಕಳುಹಿಸಿ, ಒಂಬತ್ತು ಪೌಚ್ ರಕ್ತ ತರಿಸಿಕೊಟ್ಟರು. ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ರಾಜೇಶ್ ಟಿ. ಅವರು ಗದುಗಿನಿಂದ ಉಚಿತವಾಗಿ ಚುಚ್ಚುಮದ್ದು ತರಿಸಿಕೊಟ್ಟರು. ವೈದ್ಯರ ತಂಡದ ಈ ಕೆಲಸ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ.

ಲಕ್ಷ್ಮೇಶ್ವರ: ಪ್ರೌಢಶಾಲಾ ಕ್ರೀಡಾಕೂಟಕ್ಕೆ ಶಾಸಕ ಡಾ.ಚಂದ್ರು ಲಮಾಣಿ ಚಾಲನೆ



ಲಕ್ಷ್ಮೇಶ್ವರ: ತಾಲ್ಲೂಕಿನ ಒಡೆಯರಮಲ್ಲಾಪುರದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಮಂಗಳವಾರ ಆರಂಭವಾದ ಶಿಗ್ಲಿ ಗುಂಪುಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟಕ್ಕೆ ಶಾಸಕ ಡಾ.ಚಂದ್ರು ಲಮಾಣಿ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, 'ಸೋಲು ಗೆಲುವು ಎಣಿಸದೆ ಎಲ್ಲ ಮಕ್ಕಳು ಕ್ರೀಡೆಗಳಲ್ಲಿ ಭಾಗವಹಿಸಬೇಕು. ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರಿಂದ ಮಕ್ಕಳಲ್ಲಿ ಧೈರ್ಯ ಮತ್ತು ಸಾಹಸದ ಮನೋಭಾವನೆ ಮೂಡುತ್ತದೆ. ಧೈರ್ಯ ಇದ್ದರೆ ಮಾತ್ರ ಜೀವನದಲ್ಲಿ ಏನನ್ನಾದರೂ ಸಾಧಿಸಲು ಸಾಧ್ಯ' ಎಂದು ತಿಳಿಸಿದರು.

ಮಕ್ಕಳಲ್ಲಿ ದೈಹಿಕ ಚಟುವಟಿಕೆ ಇಲ್ಲದ ಕಾರಣ ಅವರಲ್ಲಿ ವಿವಿಧ ರೋಗಗಳು ಕಾಣಿಸಿಕೊಳ್ಳುತ್ತಿವೆ.

ಕಾರಣ ದೈಹಿಕ ಶ್ರಮ ಬೇಡುವ ಆಟೋಟಗಳಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಬೇಕು' ಎಂದು ಹೇಳಿದರು.

ಶಿಕ್ಷಣ ಇಲಾಖೆಯ ಎಸ್.ಕೆ. ಹವಾಲ್ದಾರ, ಭೀಮಣ್ಣ ಯಂಗಾಡಿ, ಗಂಗಾಧರ ಮೆಣಸಿನಕಾಯಿ, ಪ್ರಾಚಾರ್ಯ

ನಾಗರಾಜ ಕಳಸಾಪುರ, ದೈಹಿಕ ಶಿಕ್ಷಕರಾದ ಕೆ.ಆರ್. ಲಮಾಣಿ, ಎಂ.ಸಿ. ಹಿರೇಮಠ, ಎಸ್.ಬಿ. ಅಣ್ಣಿಗೇರಿ, ಸೊಪ್ಪಿನ ಇದ್ದರು.

ಕುಮದ್ವತಿ ನದಿಯ ನೀರು ಸಂಗ್ರಹಿಸಲು ರೈತ ಸಂಘದಿಂದ ಪ್ರತಿಭಟನೆ



ರಾಣೆಬೆನ್ನೂರು: ತಾಲ್ಲೂಕಿನ ವಿವಿಧ ಗ್ರಾಮಗಳ ಬಳಿ ಕುಮದ್ವತಿ ನದಿಗೆ ಅಡ್ಡಲಾಗಿ ಕಟ್ಟಿರುವ ಬ್ರಿಡ್ಜ್ ಕಂ ಬ್ಯಾರೇಜ್‌ಗಳಿಗೆ ಬರಗಾಲದ ಹಿನ್ನೆಲೆಯಲ್ಲಿ ತುರ್ತು ಬ್ಯಾರೇಜ್ ಗೇಟ್ ಅಳವಡಿಸಿ ಜನ ಜಾನುವಾರುಗಳಿಗೆ ಅನುಕೂಲವಾಗುವಂತೆ ನೀರು ಸಂಗ್ರಹಿಸಬೇಕು ಎಂದು ರೈತ ಸಂಘದ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದರು.

ತಾಲ್ಲೂಕಿನ ಮುಷ್ಟೂರು, ಮಲಕನಹಳ್ಳಿ, ಮಣಕೂರು, ಲಿಂಗದಹಳ್ಳಿ, ಚಿಕ್ಕಮಾಗನೂರು, ಗೋಡಿಹಾಳ, ಕೂಲಿ, ಕುಡಪಲಿ ಗ್ರಾಮದ ಬಳಿ ಕುಮದ್ವತಿ ನದಿಗೆ ಕಟ್ಟಿರುವ ಬ್ರಿಡ್ಜ್ ಕಂ ಬ್ಯಾರೇಜ್‌ಗೆ ಗೇಟ್ ಅಳವಡಿಸುವಂತೆ ಸಣ್ಣ ನೀರಾವರಿ ಇಲಾಖೆಯ ಎಂಜಿನೀಯರ್ ಮಣಿಕಂಠ ಅವರಿಗೆ ಮನವಿ ಸಲ್ಲಿಸಿದರು.

ರೈತ ಮುಖಂಡ ರವೀಂದ್ರಗೌಡ ಎಫ್. ಪಾಟೀಲ ಮಾತನಾಡಿ, 'ಮಳೆ ಕೊರತೆಯಿಂದ ಬರಗಾಲ ಆವರಿಸಿದೆ. ಕುಮದ್ವತಿ ನದಿ ಸಂಪೂರ್ಣ ಬರಿದಾಗಿದೆ. ಸರ್ಕಾರ ಏಮರ್ಜನ್ಸಿ ವಾಟರ್ ಸ್ಟೋರೇಜ್ ಅಂತ ಘೋಷಣೆ ಮಾಡಿ ತುರ್ತು ಬ್ಯಾರೇಜ್ ಗೇಟ್ ಅಳವಡಿಸಿ ಜನ–ಜಾನುವಾರುಗಳಿಗೆ ಅನುಕೂಲ ಮಾಡಿಕೊಡಬೇಕು' ಎಂದು ಆಗ್ರಹಿಸಿದರು.

ಕುಮದ್ವತಿ ನದಿಗೆ ಸಣ್ಣ ನೀರಾವರಿ ಇಲಾಖೆಯಿಂದ ಕಟ್ಟಿರುವ ಬ್ರಿಡ್ಜ್ ಕಂ ಬ್ಯಾರೇಜ್‌ನಲ್ಲಿ ಈಗಿರುವ ನೀರನ್ನು ಬ್ಯಾ–ರೇಜ್ ಗೇಟ್ ಅಳವಡಿಸುವ ಮೂಲಕ ನೀರನ್ನು ಸಂಗ್ರಹಿಸಬೇಕು. ಮುಂದಿನ ದಿನಗಳಲ್ಲಿ ಎದುರಾಗಬಹುದಾದ ನೀರಿನ ಸಮಸ್ಯೆಯನ್ನು ಸಮರ್ಥವಾಗಿ ಎದುರಿಸಬೇಕಾಗಿದೆ.ಸಣ್ಣನೀರಾವರಿಇಲಾಖೆ ಗೇಟ್ ಅಳವಡಿಸುವ ದಿನಾಂಕಕ್ಕೆ ಕಾಯದೆ ಕುಮದ್ವತಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಬ್ರಿಡ್ಜ್ ಕಂ ಬ್ಯಾರೇಜುಗಳ ಗೇಟುಗಳನ್ನು ಕೂಡಲೇ ಹಾಕಿ ನೀರನ್ನು ಸಂಗ್ರಹಿಸಿ ಜೀವ ಸಂಕುಲವನ್ನು ಕಾಪಾಡಬೇಕಾಗಿದೆ' ಎಂದು ಒತ್ತಾಯಿಸಿದರು.

ಧರ್ಮರಡ್ಡಿ ನಿಂಗರಡ್ಡೇರ, ಹರಿಹರಗೌಡ ಪಾಟೀಲ, ಯಲ್ಲಪ್ಪ ಓಲೇಕಾರ, ಗುರುನಗೌಡ ಪಾಟೀಲ, ಹನುಮರಡ್ಡಿ ಬಳ್ಳಾರಿ, ಶೇಖನಗೌಡ ಪಾಟೀಲ, ಪ್ರಭಣ್ಣ ಮುಷ್ಟೂರುನಾಯ್ಕ, ಸಂಕನಗೌಡ ಪಾಟೀಲ, ಯಲ್ಲರಡ್ಡಿ ಯರೇಕುಪ್ಪಿ, ಮಾರುತಿ ಅಂಗಡಿ, ಗೋವಿಂದಪ್ಪ ಕೊರೆರ, ಹಾಲೇಶ ಹೊಳೆಆನ್ವೇರಿ, ಉಮೇಶ ಮುಷ್ಟೂರು ನಾಯ್ಕ, ಮಾಂತೇಶ ದೂಳೆಹೊಳೆ, ಸುರೇಶ ಹೊನ್ನತ್ತಿ, ಜಮಾಲಸಬಾ ಶೇತಸನದಿ, ಕುಮಾರಿ ಕೋಣನತಲಿ, ವಿಜಯ ನಿಂಗರಡ್ಡೇರ,ಯಲ್ಲರಡ್ಡಿಬಳ್ಳಾರಿ,ಶಿವರಾಜ್ ಎಚ್.ಎಂ, ಮಂಜಪ್ಪ ಅಜ್ಜೇರ, ಮಂಜಪ್ಪ ಜಾನಪ್ಪನವರ, ಸದಾಶಿವ ಯರೇಶಿಮಿ, ಗಿರಿಯಪ್ಪ ಹಿರೇಮರದ, ಗಜೇಂದ್ರ ಹಳ್ಳೆಳ್ಳರ, ಬಸವರಾಜ ಅಜ್ಜೇರ, ಶ್ರೀನಿವಾಸ, ಬಿ.ಕೆ. ತೋಟಗಂಟಿ ಇದ್ದರು.

ವಿಶ್ವಕರ್ಮರು ಕಾಯಕದಲ್ಲಿ ಶ್ರಮಜೀವಿಗಳು, ಒಗ್ಗಟ್ಟಿನ ಕೊರತೆ: ಸ್ವಾಮೀಜಿ



ರಾಣೆಬೆನ್ನೂರು: ವಿಶ್ವಕರ್ಮರು ಕಾಯಕದಲ್ಲಿ ಶ್ರಮಜೀವಿಗಳು. ಅವರಿಗೆ ಕಲೆ, ಕೌಶಲ ದೈವದತ್ತವಾಗಿ ಬಂದಿದೆ. ಆದರೆ ಅವರಲ್ಲಿ ಒಗ್ಗಟ್ಟು, ಬಾಂಧವ್ಯದ ಕೊರತೆ ಎದ್ದು ಕಾಣುತ್ತಿದ್ದು, ನಿಮ್ಮ ಅಸ್ತಿತ್ವ, ಉಳಿವಿಗೆ ಹೋರಾಟದ ಮನೋಭಾವ ಬೆಳೆಸಿಕೊಳ್ಳಿ. ಮನಸ್ಥಿತಿ ಬದಲಾಯಿಸಿಕೊಳ್ಳಬೇಕು ಎಂದು ಚಿಕ್ಕುಂಬಿಯ ಅಜಾತನಾಗಲಿಂಗಸ್ವಾಮಿ ಮಠದ ಅಭಿನವನಾಗಲಿಂಗ ಸ್ವಾಮೀಜಿ ಹೇಳಿದರು.

ಇಲ್ಲಿನ ಕುರುಬಗೇರಿ ವೃತ್ತ ಸಮೀಪದ ಮೌನೇಶ್ವರ ದೇವಸ್ಥಾನದ ಸಭಾಭವನದಲ್ಲಿ ತಾಲ್ಲೂಕು ವಿಶ್ವಕರ್ಮ ಸಮಾಜ, ಮೌನೇಶ್ವರ ಕಮಿಟಿ, ಕಾಳಿಕಾದೇವಿ ಮಹಿಳಾ ಮಂಡಳ, ವಿಶ್ವಕರ್ಮ ಪತ್ತಿನ ಸೌಹಾರ್ದ ಸಹಕಾರ ಸಂಘ, ತಾಲ್ಲೂಕು ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ಗುರುವಾರ ಏರ್ಪಡಿಸಿದ್ದ ಭಗವಾನ್ ವಿಶ್ವಕರ್ಮ ಮಹೋತ್ಸವದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಕರ್ಮರು ಜಗತ್ತಿನ ಸೃಷ್ಟಿಯ ಪ್ರಥಮ ಎಂಜಿನೀಯರ್ ಆಗಿದ್ದಾರೆ. ಇಂತಹ ವಿಶ್ವಕರ್ಮರು ಮನುಷ್ಯನ ಹುಟ್ಟು ಸಾವಿನ ನಡುವಿನ ಜೀವನದ ಅವಿಭಾಜ್ಯ ಅಂಗವಾಗಿ ಕಾರ್ಯ ನಿರ್ವಹಿಸುವವರಾಗಿದ್ದಾರೆ ಎಂದರು.

ಮಾಜಿ ಶಾಸಕ ಅರುಣಕುಮಾರ ಪೂಜಾರ ಮಾತನಾಡಿ, ಇಡೀ ಜಗತ್ತಿಗೆ ವಿಶ್ವಕರ್ಮರ ಕೊಡುಗೆ ಅಪಾರವಾದುದು. ಇಂತಹ ವಿಶ್ವಕರ್ಮರ ಕೌಶಲ ಗುರುತಿಸಿದ್ದು ನರೇಂದ್ರ ಮೋದಿಯವರು. ಅವರ ಜನ್ಮ ದಿನದಂದೇ ಆಚರಣೆ ಮಾಡುತ್ತಿರುವುದು ಸಂತಸದ ಸಂಗತಿ. ವಿಶ್ವಕರ್ಮ ಸಮಾಜದ ಸಮುದಾಯ ಭವನದ ನಿರ್ಮಾಣಕ್ಕೆ ಈಗಾಗಲೇ 25 ಲಕ್ಷ ಅನುದಾನ ನೀಡಲಾಗಿದೆ. ಮುಂದಿನ ದಿನಗಳಲ್ಲಿಯೂ ಸಮಾಜದೊಡನೆ ನಾವಿದ್ದೇವೆ ಎಂದು ಭರವಸೆ ನೀಡಿದರು.

ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ಮಂಜುನಾಥ ಗೌಡಶಿವಣ್ಣನವರ ಮಾತನಾಡಿದರು. ಮೌನೇಶ್ವರ ಕಮಿಟಿ ಅಧ್ಯಕ್ಷ ಓಂಕಾರಾಚಾರ್ ಅರ್ಕಾಚಾರಿ, ದೈವಜ್ಞ ಸಮಾಜದ ಅಧ್ಯಕ್ಷ ಸಂಜೀವ ಶೇಜವಾಡಕರ, ಕಾಳಿಕಾದೇವಿಮಹಿಳಾಮಂಡಳದ ಅಧ್ಯಕ್ಷೆ ಶುಭಾ ಬೆಳ್ಳೂಡಿ, ಮಾಲತೇಶ ಕಮ್ಮಾರ, ಕೃಷ್ಣ ಕಮ್ಮಾರ, ವೀರಣ್ಣ ಅರ್ಕಾಚಾರಿ, ಬಸವರಾಜ ಬಡಿಗೇರ, ಸುಭಾಷ ಸಿರಿಗೇರಿ, ನಿಂಗಪ್ಪ ಸತ್ಯಪ್ಪನವರ, ಸ್ಮಿತಾ ಬೆಳ್ಳೂಡಿ, ಚಿದಾನಂದ ಇದ್ದರು.

ವಿದ್ಯುತ್ ಪೂರೈಕೆಗೆ ಆಗ್ರಹಿಸಿ ರಾಣೆಬೆನ್ನೂರಿನಲ್ಲಿ ರೈತರ ಪ್ರತಿಭಟನೆ



ರಾಣೆಬೆನ್ನೂರು: ತಾಲ್ಲೂಕಿನಲ್ಲಿ ಮುಂಗಾರು ಮಳೆ ಕೊರತೆಯಿಂದ ಬರಗಾಲ ಆವರಿಸಿ ತಾಲ್ಲೂಕಿನಲ್ಲಿ ಅನಧೀಕೃತ ಹಾಗೂ ವಿದ್ಯುತ್ ವ್ಯತ್ಯಯವಾಗುತ್ತಿರುವುದನ್ನು ಖಂಡಿಸಿ ಗುರುವಾರ ನಗರದ ಹೆಸ್ಕಾಂ ಕಚೇರಿ ಎದುರು ತಾಲ್ಲೂಕು ರೈತ ಸಂಘಟನೆ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ರೈತ ಸಂಘಟನೆಯ ಜಿಲ್ಲಾ ಘಟಕದ ಅಧ್ಯಕ್ಷ ಈರಣ್ಣ ಹಲಗೇರಿ ಮಾತನಾಡಿ, ಮುಂಗಾರು ಮಳೆಯ ಅಭಾವದಿಂದ ಒಣಭೂಮಿಯಲ್ಲಿನ ಬಹುಪಾಲು ಬೆಳೆಗಳು ಒಣಗಿದ್ದು, ಮಾಡಿದ ಖರ್ಚು ಕೂಡ ವಾಪಸ್ ಬಾರದ ಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ಉಳಿದಿರುವ ಕೊಳವೆಬಾವಿ ಹಾಗೂ ಪಂಪ್‌ಸೆಟ್ ಆಧಾರಿತ ಜಮೀನುಗಳ ಬೆಳೆಗಳನ್ನಾದರೂ ಉಳಿಸಿಕೊಳ್ಳುವ ಪ್ರಯತ್ನದಲ್ಲಿರುವಾಗ ಅನಿಯಮಿತ ವಿದ್ಯುತ್ ವ್ಯತ್ಯಯ ಆಗುತ್ತಿರುವುದರಿಂದ ನೀರುಣಿಸಲು ಸಾಧ್ಯವಾಗುತ್ತಿಲ್ಲ. ಇದ–ರಿಂದ ರೈತರ ಸಂಕಷ್ಟ ಮತ್ತಷ್ಟು ಹೆಚ್ಚಾಗಿದೆ ಎಂದರು.

ಕನಿಷ್ಠ ದಿನಕ್ಕೆ 10 ಗಂಟೆಗಳ ಕಾಲ ವಿದ್ಯುತ್ ಪೂರೈಸಬೇಕು.

ಇತರ ವಲಯಗಳಿಗೆ ನೀಡುವ ವಿದ್ಯುತ್ ಪೂರೈಕೆಗಿಂತ ರೈತರ ನೀರಾವರಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಇದೇ ರೀತಿ ಮುಂದುವರಿದರೆ ಮುಂದಿನ ದಿನಗಳಲ್ಲಿ ನಗರದ ಹೆಸ್ಕಾಂ ಕಚೇರಿ ಹಾಗೂ ಸಂಬಂಧಿಸಿದ ಇಲಾಖೆಯ ಸಚಿವರ ನಿವಾಸದ ಎದುರು ಅಹೋರಾತ್ರಿ ಧರಣಿ ನಡೆಸಲಾಗುವುದು ಎಂದು ಎಚ್ಚರಿಸಿದರು.

ರಾಜ್ಯ ಸಂಘಟನಾ ಕಾರ್ಯದರ್ಶಿ ರವೀಂದ್ರಗೌಡ ಪಾಟೀಲ, ಹನುಮಂತಗೌಡ ನದಿಹರಹಳ್ಳಿ, ಗಜೇಂದ್ರಪ್ಪ ಹಲಗೇರಿ, ಬಸನಗೌಡ ಭರಮಗೌಡ್ರ, ಹನುಮಂತಪ್ಪ ಆರೇರ, ಚಂದ್ರು ಭರಮಗೌಡ್ರ, ಕುಮಾರ ಮುದಿಗೌಡ್ರ, ಚಂದ್ರಪ್ಪ ಅಂಗಡಿ, ಸುರೇಶ ನಲವಾಗಲ, ಪ್ರಭು ಮುದೇನೂರು, ಭೀಮಜ್ಜ ಪೂಜಾರ,

ಎಲ್ಲಪ್ಪ ರಡ್ಡಿ, ಮಲ್ಲೇಶ ಹಲಗೇರಿ, ಉಜ್ಜಪ್ಪ ಕಾಸಿ, ಸತೀಶ ಹಲಗೇರಿ, ನಿಂಗೇಶ ಹಲಗೇರಿ ಇದ್ದರು.

ತಂಬಾಕು ಸೇವನೆ ತ್ಯಜಿಸಿ: ಬೊಮ್ಮಾಯಿ, ಆಯುಷ್ಮಾನ್ ಆರೋಗ್ಯ ಕೇಂದ್ರಕ್ಕೆ ಶಿಲಾನ್ಯಾಸ



ಬ್ಯಾಡಗಿ: ತಾಲ್ಲೂಕಿನ ಚಿಕ್ಕಬಾಸೂರ ಮತ್ತು ಸೂಡಂಬಿ ಗ್ರಾಮಗಳಲ್ಲಿ ಒಟ್ಟು 3.85 ಲಕ್ಷ ಅನುದಾನದಲ್ಲಿ ನಿರ್ಮಾಣವಾಗಲಿರುವ

ಆಯುಷ್ಮಾನ ಆರೋಗ್ಯ ಕೇಂದ್ರದ ಕಟ್ಟಡ ಕಾಮಗಾರಿಗೆ ಸಂಸದ ಬಸವರಾಜ ಬಸವರಾಜ ಬೊಮ್ಮಾಯಿ ಬುಧವಾರ ಶಿಲಾನ್ಯಾಸ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಪ್ರಸ್ತುತ ಗುಟ್ಕಾ, ಬೀಡಿ, ಸಿಗರೇಟು ಸೇವನೆ ಹೆಚ್ಚುತ್ತಿದ್ದು, ಇದರಿಂದ ಬಹಳಷ್ಟು ಜನರಲ್ಲಿ ಆರೋಗ್ಯ ಸಮಸ್ಯೆಗಳಾಗುತ್ತಿವೆ. ವೈದ್ಯರಿಂದ ದೂರವಿರಬೇಕಾದರೆ ತಂಬಾಕು ಉತ್ಪನ್ನಗಳ ಸೇವನೆ ತ್ಯಜಿಸಬೇಕು. ಗ್ರಾಮೀಣ ಭಾಗದ ಜನರಿಗೆ ಪ್ರಥಮ ಹಂತದಲ್ಲಿ ಚಿಕಿತ್ಸೆ ದೊ–ರೆಯಲಿ ಎನ್ನುವ ಉದ್ದೇಶದಿಂದ ಆಯುಷ್ಮಾ ಕೇಂದ್ರಗಳ ಕಟ್ಟಡ ನಿರ್ಮಾಣಕ್ಕೆ ಮುಂದಾಗಿದ್ದು, ಗುತ್ತಿಗೆದಾರರು ಕಾಮಗಾರಿ ಕಳಪೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಶಾಸಕ ಬಸವರಾಜ ಶಿವಣ್ಣನವರ ಮಾತನಾಡಿ, ಗುಡ್ಡದಮಲ್ಲಾಪುರ ಏತ ಯೋಜನೆಯಡಿ ಕೊಳವೆ ಮೂಲಕ 136 ಕೆರೆಗಳನ್ನು ತುಂಬಿಸಲು ಸರ್ಕಾರ 115 ಕೋಟಿ ಅನುದಾನ ಬಿಡುಗಡೆಗೆ ಸಂಪುಟ ಸಭೆ ಆಡಳಿತಾತ್ಮಕ ಅನುಮೋದನೆ ನೀಡಿದೆ. ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಶೀಘ್ರ ಯೋಜನೆ ಆರಂಭವಾಗಲಿದೆ ಎಂದರು.

ಮಾಜಿ ಶಾಸಕ ವಿರೂಪಾಕ್ಷಪ್ಪ ಬಳ್ಳಾರಿ, ಮಂಜನಗೌಡ ಪಾಟೀಲ, ಪ್ರಭುಗೌಡ ಪಾಟೀಲ, ವೀರಭದ್ರಪ್ಪ ಗೊಡಚಿ, ಶಾಂತಪ್ಪ ದೊಡ್ಡಮನಿ, ವರುಣ ಮಲ್ಲಿಗಾರ, ಲಿಂಗನಗೌಡ ಪಾಟೀಲ, ಪರಮೇಶ ಚಿಕ್ಕಳ್ಳಿ, ಮಾದೇವಪ್ಪ ಓಲೇಕಾರ, ಎಂ.ಎಸ್.ಪಾಟೀಲ, ಲಿಂಗರಾಜ ಕುಮ್ಮೂರು, ಗುತ್ತಿಗೆದಾರ ರಮೇಶ ಓಲೇಕಾರ ಇದ್ದರು.

ಕೈಗಳನ್ನು ಕಟ್ಟಿಹಾಕಿ ಕೊಲೆ: ಆರೋಪ

ಹಾವೇರಿ: ಜಿಲ್ಲೆಯ ಹಲಗೇರಿ ಠಾಣೆ ವ್ಯಾಪ್ತಿಯಲ್ಲಿರುವ ತುಂಗಭದ್ರಾ ನದಿಯಲ್ಲಿ ಶಿವಪ್ಪ ಕಲ್ಲಪ್ಪ ಗಂಗರಗೊಂಡ (35) ಎಂಬುವವರ ಮೃತದೇಹ ಪತ್ತೆಯಾಗಿದ್ದು, 'ಕೈಗಳನ್ನು ಕಟ್ಟಿಹಾಕಿ ಕೊಲೆ ಮಾಡಿ ನದಿಗೆ ಎಸೆಯಲಾಗಿದೆ' ಎಂಬ ಆರೋಪ ವ್ಯಕ್ತವಾಗುತ್ತಿದೆ.

ಗದಗ ಜಿಲ್ಲೆಯ ಗಜೇಂದ್ರಗಡ ತಾಲ್ಲೂಕಿನ ನರೇಗಲ್ ಗ್ರಾಮದ ಶಿವಪ್ಪ, ಗಾಳಿಸಕ ಹಾಕಿರುವುದಾಗಿ ನಂಬಿ ಹರಿಹರ ತಾಲ್ಲೂಕಿನ ಉಕ್ಕಡಗಾತ್ರಿ ಗ್ರಾಮದ ಕರಿಬಸವೇಶ್ವರ ದೇವಸ್ಥಾನಕ್ಕೆ ಇತ್ತೀಚೆಗೆ ಬಂದು ಉಳಿದುಕೊಂಡಿದ್ದರು. ಈಗ ಅವರ ಮೃತದೇಹ ನದಿಯಲ್ಲಿ ಪತ್ತೆಯಾಗಿದೆ. ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಲಾಗಿದೆ' ಎಂದು ಪೊಲೀಸರು ಹೇಳಿದರು.

ಶಿವಪ್ಪ ಅವರು ಪೆಂಡಾಲ್ ಹಾಕುವ ಕೆಲಸ ಮಾಡುತ್ತಿದ್ದರು. ದೇವಸ್ಥಾನದಲ್ಲಿಯೇ ಹಲವು ದಿನಗಳಿಂದ ಉಳಿದುಕೊಂಡಿದ್ದರು. ಊರಿಗೆ ವಾಪಸು ಹೋಗಿರಲಿಲ್ಲ. ಸೆ. 10ರಂದು ರಾತ್ರಿಯಿಂದ ಸೆ. 11ರ ನಸುಕಿನ ಅವಧಿಯಲ್ಲಿ ಯಾರೋ ದುಷ್ಕರ್ಮಿಗಳು, ಶಿವಪ್ಪ ಅವರ ಕೈಗಳನ್ನು ಬೆನ್ನ ಹಿಂದೆ ಕಟ್ಟಿ ಕೊಲೆ ಮಾಡಿರುವ ಶಂಕೆಯಿದೆ. ನಂತರ, ಮೃತದೇಹವನ್ನು ನದಿಗೆ ಎಸೆಯಲಾಗಿದೆ. ಅದೇ ಮೃತದೇಹ ಹಲಗೇರಿ ಠಾಣೆ ವ್ಯಾಪ್ತಿಗೆ ಬಂದಿದೆ' ಎಂದು ತಿಳಿಸಿದರು.

ಸಂಸತ್ತನ್ನು ಕಾರ್ಪೊರೇಟ್ ಕಚೇರಿಗಳು ನಿಯಂತ್ರಿಸುತ್ತಿವೆ : ಪಿ.ಜೆ.ಜೇಮ್ಸ್



ರಾಯಚೂರು: ದೇಶದಲ್ಲಿ ಆರೆಸ್ಸೆಸ್‌ನ ರಾಜಕೀಯ ಮುಖವಾಡವಾಗಿ ಬಿಜೆಪಿ ಸರ್ಕಾರ ಕಾರ್ಯನಿರ್ವಹಿಸುತ್ತಿದ್ದು, ಪ್ರಸ್ತುತ ಸಂಸತ್ತನ್ನು ಕೇವಲ ಒಂದು ಪ್ರದರ್ಶನ ವಸ್ತುವನ್ನಾಗಿಸಿ, ನೀತಿ–ನಿರ್ಧಾರಗಳನ್ನು ಕಾರ್ಪೊರೇಟ್ ಕಚೇರಿಗಳು ಹಾಗೂ ನಾಗ್ಪುರದ ಕೇಂದ್ರ ಕಚೇರಿಯಿಂದ ನಿಯಂತ್ರಿಸಲಾಗುತ್ತಿದೆ ಎಂದು ಸಿಪಿಐ(ಎಂಎಲ್) ರೆಡ್‌ಸ್ಟಾರ್‌ನ ಪ್ರಧಾನ ಕಾರ್ಯದರ್ಶಿ ಪಿ.ಜೆ.ಜೇಮ್ಸ್ ಆರೋಪಿಸಿದರು.

ಬುಧವಾರ ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆದ ಸಿಪಿಐ(ಎಂಎಲ್) ರೆಡ್‌ಸ್ಟಾರ್ 13ನೇ ಮಹಾಧಿವೇಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದ ಫ್ಯಾಸಿಸಂ ಯುರೋಪಿನ ಫ್ಯಾಸಿಸಂಗಿಂತ ವಿಭಿನ್ನವಾಗಿದ್ದು, ಅದು ಮುಸ್ಲಿಂ ವಿರೋಧಿ ರಾಜಕೀಯ ಮತ್ತು ಜಾತಿವಾದದ ನೆಲೆಯ ಮೇಲೆ ರೂಪುಗೊಂಡಿದೆ. ಹಿಟ್ಲರ್ ಯಹೂದಿಗಳ ವಿರುದ್ಧ ಅನುಸರಿಸಿದ್ದ ನೀತಿಯ ಮಾದರಿಯಲ್ಲೇ ಆರೆಸ್ಸೆಸ್ ಗೋಲ್ವಾಲ್ಕರ್ ಕಾಲದಿಂದಲೂ ಮುಸ್ಲಿಮರನ್ನು ಗುರಿಯಾಗಿಸಿಕೊಂಡು ಬಂದಿದೆ ಎಂದು ಆರೋಪಿಸಿದರು.

ಸಮಾವೇಶದಲ್ಲಿ ಪಾಲ್ಗೊಳ್ಳಲು ವಿದೇಶಗಳಿಂದ ಬರಬೇಕಿದ್ದ ಹಲವು ಪ್ರತಿನಿಧಿಗಳಿಗೆ ವೀಸಾ ಸಂಬಂಧಿತ ತೊಂದರೆಗಳಿಂದ ಭಾರತಕ್ಕೆ ಆಗಮಿಸಲು ಸಾಧ್ಯವಾಗಿಲ್ಲ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುತ್ತಿರುವ ಕಾರಣಕ್ಕೆ ಭಾರತೀಯ ಸರಕುಗಳ ಮೇಲೆ ಶೇ.100ರಷ್ಟು ಸುಂಕ ವಿಧಿಸುವ ಮಸೂದೆಯನ್ನು ಅಮೆರಿಕದ ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್‌ನಲ್ಲಿ ಮಂಡಿಸಲಾಗಿದ್ದರೂ, ಕೇಂದ್ರ ಸರ್ಕಾರ ಅಮೆರಿಕವನ್ನು ಪ್ರಶ್ನಿಸಲು ಹಿಂಜರಿಯುತ್ತಿದೆ ಎಂದು ಆರೋಪಿಸಿದರು. ಇತ್ತೀಚಿನ ಬ್ರಿಕ್ಸ್ ಶೃಂಗಸಭೆಯಲ್ಲಿಯೂ ಪ್ಯಾಲೆಸ್ಟೀನ್ ಮತ್ತು ಇರಾನ್ ಮೇಲಿನ ಯುದ್ಧದ ವಿಚಾರದಲ್ಲಿ ಅಮೆರಿಕ ಹಾಗೂ ಇಸ್ರೇಲ್ ವಿರುದ್ಧ ಕಠಿಣ ನಿಲುವು ತಾಳಲಿಲ್ಲ. ಡಾಲರ್ ಅವಲಂಬನೆ ಕಡಿಮೆ ಮಾಡುವ ಪ್ರಕ್ರಿಯೆಯಲ್ಲೂ ಭಾರತ ಸರ್ಕಾರ ಬದ್ಧತೆ ತೋರಲಿಲ್ಲ ಎಂದರು.

ಅದಾನಿ ಮತ್ತು ಅಂಬಾನಿಯಂತಹ ಬಂಡವಾಳಶಾಹಿಗಳು ಜಾಗತಿಕ ಬಹುರಾಷ್ಟ್ರೀಯ ಕಂಪನಿಗಳ ಕಿರಿಯ ಪಾಲುದಾರರಾಗಿದ್ದು, ಭಾರತದಲ್ಲಿ ಸ್ವತಂತ್ರ ತಂತ್ರಜ್ಞಾನ ನಿಯಂತ್ರಣ ಇಲ್ಲ ಎಂದು ಹೇಳಿದರು. “ವಿಶ್ವಗುರು” ಎಂದು ಹೇಳಿಕೊಳ್ಳುವ ಭಾರತ, ಕೃತಕ ಬುದ್ಧಿಮತ್ತೆ (ಎಐ) ಸೇರಿದಂತೆ ನಾಲ್ಕನೇ ಕೈಗಾರಿಕಾ ಕ್ರಾಂತಿಯ ಯುಗದಲ್ಲಿ ಚೀನಾ ಮತ್ತು ಅಮೆರಿಕದ ತಂತ್ರಜ್ಞಾನಗಳ ಮೇಲೆಯೇ ಅವಲಂಬಿತವಾಗಿದೆ. ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಚೀನಾಕ್ಕಿಂತ ಹಿಂದುಳಿದಿದೆ ಎಂದು ಅಭಿಪ್ರಾಯಪಟ್ಟರು.

ಕಮ್ಯುನಿಸ್ಟ್ ಚಳವಳಿಯ ಇತಿಹಾಸವನ್ನು ಉಲ್ಲೇಖಿಸಿದ ಅವರು, ಭಾರತದಲ್ಲಿನ ಸಾಂಪ್ರದಾಯಿಕ ಕಮ್ಯುನಿಸ್ಟ್ ಚಳವಳಿಗಳು ಜಾತಿ ಪ್ರಶ್ನೆಯನ್ನು ಸಮರ್ಪಕವಾಗಿ ಅರ್ಥಮಾಡಿಕೊಳ್ಳುವಲ್ಲಿ ವಿಫಲವಾಗಿವೆ ಎಂದು ಆತ್ಮಾವಲೋಕನ ಮಾಡಿಕೊಂಡರು. ಭಾರತದಲ್ಲಿ ಯುರೋಪಿಯನ್ ಮಾದರಿಯ ವರ್ಗ ವಿಶ್ಲೇಷಣೆ ಅನ್ವಯಿಸುವುದಿಲ್ಲ. ಇಲ್ಲಿ ಜಾತಿ ಮತ್ತು ವರ್ಗ ಪರಸ್ಪರ ಬೆಸೆದುಕೊಂಡಿದ್ದು, ಜಾತಿ ವಿನಾಶದ ಹೋರಾಟವೇ ವರ್ಗ ಸಂಘರ್ಷದ ಅವಿಭಾಜ್ಯ ಅಂಗವಾಗಿದೆ ಎಂದು ಪ್ರತಿಪಾದಿಸಿದರು.

ರಾಯಚೂರಿನಲ್ಲಿ ದಾಖಲಾಗುತ್ತಿರುವ ತೀವ್ರ ತಾಪಮಾನ ಹಾಗೂ ಜಾಗತಿಕ ಹವಾಮಾನ ಬಿಕ್ಕಟ್ಟಿಗೆ ಕಾರ್ಪೊರೇಟ್ ಬಂಡವಾಳಶಾಹಿಯೇ ನೇರ ಕಾರಣ ಎಂದು ಆರೋಪಿಸಿದ ಅವರು, ಕಾರ್ಲ್ ಮಾರ್ಕ್ಸ್ ಹೇಳಿದಂತೆ ಬಂಡವಾಳಶಾಹಿಯು ಮಾನವ ಅಸ್ತಿತ್ವದ ಮೂಲಗಳಾದ ಶ್ರಮ ಮತ್ತು ಪ್ರಕೃತಿ ಎರಡನ್ನೂ ನಾಶಪಡಿಸುತ್ತಿದೆ ಎಂದರು. ನೇಪಾಳದಲ್ಲಿ ಹಿಮಪರ್ವತಗಳು ಕರಗುತ್ತಿರುವುದು, ಓಝೋನ್ ಸವಕಳಿ ಸೇರಿದಂತೆ ಪರಿಸರ ಸಮಸ್ಯೆಗಳು ಬಂಡವಾಳಶಾಹಿ ಲೂಟಿಯ ಪರಿಣಾಮ ಎಂದು ಹೇಳಿದರು.

ವಿಶ್ವಾದ್ಯಂತ ಯುವಜನರು, ಮಹಿಳೆಯರು ಮತ್ತು ಕಾರ್ಮಿಕರು ಹೋರಾಟ ನಡೆಸುತ್ತಿದ್ದರೂ, ಅದನ್ನು ರಾಜಕೀಯ ಪರ್ಯಾಯವನ್ನಾಗಿ ರೂಪಿಸುವ ಪ್ರಬಲ ಕಮ್ಯುನಿಸ್ಟ್ ಚಳವಳಿಯ ಕೊರತೆಯಿದೆ ಎಂದು ಅವರು ಅಭಿಪ್ರಾಯಪಟ್ಟರು. ಮಹಾಧಿವೇಶನದ ಮುಂದಿನ ದಿನಗಳಲ್ಲಿ ಪಕ್ಷದ ರಾಜಕೀಯ ಪ್ರಸ್ತಾವನೆಗಳು, ಕಾರ್ಯಕ್ರಮಗಳು ಹಾಗೂ ಭವಿಷ್ಯದ ಹೋರಾಟದ ನೀತಿ–ನಿಯಮಗಳ ಕುರಿತು ಪ್ರತಿನಿಧಿಗಳ ಸಭೆಯಲ್ಲಿ ಚರ್ಚಿಸಿ ಅಂತಿಮಗೊಳಿಸಲಾಗುವುದು ಎಂದು ತಿಳಿಸಿದರು.

ವೇದಿಕೆಯಲ್ಲಿ ಎಂಸಿಪಿಐ(ಯು) ಪ್ರಧಾನ ಕಾರ್ಯದರ್ಶಿ ಅಶೋಕ ಓಂಕಾರ, ತಮಿಳುನಾಡಿನ ಕಮ್ಯುನಿಸ್ಟ್ ಪಾರ್ಟಿ ಬಾಲನ್, ಸೆಂಟರ್ ಫಾರ್ ಸೋಶಿಯಲ್ ಆಕ್ಟಿವಿಸ್ಟ್‌ಸುಮಿತ ಘೋಷ,ಕೇರಳದ ಎಂ.ಕೆ. ದಾಸನ್, ತಮಿಳುನಾಡಿನ ಮನೋಹರನ್, ಆಂಧ್ರಪ್ರದೇಶದ ಹರಿಪ್ರಸಾದ,ತೆಲಂಗಾಣದ ಮುಹಮ್ಮದ್ ಬಾಷಾ, ಛತ್ತೀಸಗಡ ಸೌರಾ ರಾಜ್ಯ, ಮಧ್ಯಪ್ರದೇಶದ ಫಹಿಂ, ಪಶ್ಚಿಮ ಬಂಗಾಳದ ಕನ್ವಯ್ಯ, ದೆಹಲಿ ವಿಜಯ, ಪಂಜಾಬನ ಲಾಭ್‌ಸಿಂಗ್ ಸಾಗರೋತ್ತರ ಸಮಿತಿಪ್ರದುಶಕುಮಾರ, ಟಿಯುಸಿಐ ರಾಷ್ಟ್ರೀಯ ಅಧ್ಯಕ್ಷ ಸಾಬಿ ಜೋಸೆಫ್ , ಕರ್ನಾಟಕ ಎಐಕೆಕೆಎಸ್‌ನ ರುದ್ರಯ್ಯ, ದೆಹಲಿಯ ಎಐಆರ್‌ಎಸ್‌ಓನ ಅಂಜನ ಆಜಾದ್, ಛತ್ತೀಸಗಡನ ತುಹಿನ್, ಜಾತಿ ನಿರ್ಮೂಲನಾ ಚಳುವಳಿಯ ಇನಿಯಾವನ್, ಆದಿವಾಸಿ ಭಾರತ ಮಹಾಸಭಾದ ಉರ್ಮಿಳಾ, ಎಫ್‌ಇಪಿಎಡಿನ ಜಯರಾಜ್‌ನ, ಆರ್. ಮಾನಸಯ್ಯ ಇದ್ದರು. ಎಂ.ಡಿ.ಇಕ್ಬಾಲ್ ಸ್ವಾಗತಿಸಿದರು. ಎಂ.ಡಿ.ಅಮೀರ್ ಅಲಿ ವಂದಿಸಿದರು. ವಿವಿಧ ರಾಜ್ಯಗಳಿಂದ ಆಗಮಿಸಿದ ಪ್ರತಿನಿಧಿಗಳು ಭಾಗಿಯಾದರು.

ದೇಶದ ಪ್ರಗತಿಯಲ್ಲಿ ಎಂಜಿನಿಯರ್‌ಗಳ ಕೋಡುಗೆ ಅಮೋಘ ಎಂದ ರಮೇಶ ರಾಠೋಡ



ಹುಣಸಗಿ: ‘ಬದಲಾಗುತ್ತಿರುವ ಕಾಲಘಟ್ಟಕ್ಕೆ ತಕ್ಕಂತೆ ತಂತ್ರಜ್ಞಾನದ ಬಳಕೆಯ ಜೊತೆಯಲ್ಲಿ ದೇಶದ ಅಭಿವೃದ್ಧಿಯಲ್ಲಿ ಎಂಜಿನಿಯರ್‌ಗಳು ತಮ್ಮದೇ ಆದ ಕೋಡುಗೆಯನ್ನು ಸಲ್ಲಿಸುತ್ತಾ ಬಂದಿದ್ದಾರೆ’ ಎಂದು ಸೂಪರಿಟೆಂಡೆಂಟ್ ಎಂಜಿನಿಯರ್ ರಮೇಶ ರಾಠೋಡ ಹೇಳಿದರು.

ಹುಣಸಗಿ ಪಟ್ಟಣ ಕೃಷ್ಣಾ ಭಾಗ್ಯ ಜಲ ನಿಗಮದ ವಿಭಾಗದ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಎಂಜಿನಿಯರ್‌ಗಳ ದಿನಾಚರಣೆಯಲ್ಲಿ ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯನವರ ಮೂರ್ತಿಗೆ ಪೂಜೆ ಸಲ್ಲಿಸಿ ಮಾತನಾಡಿದರು.

ಇಂದು ಪ್ರತಿಯೊಂದು ರಂಗದಲ್ಲಿಯೂ ತಾಂತ್ರಿಕೆ ಬಳಸುವುದು ಅಗತ್ಯವಾಗಿದೆ. ಈ ಹಂತದಲ್ಲಿ ಎಂಜಿನಿಯರ್‌ಗಳು ತಮ್ಮದೇ ಆದ ವಿಭಿನ್ನ ಕೌಶಲಗಳ ಬಳಕೆ ಮೂಲಕ ಸಮಾಜದ ಅಭಿವೃದ್ಧಿಯಲ್ಲಿ ತೊಡಗಿಕೊಳ್ಳುತ್ತಿದ್ದಾರೆ’ ಎಂದರು.

ಕೆಬಿಜೆಎನ್‌ಎಲ್ ಕಾರ್ಯನಿರ್ವಾಹಕ ಎಂಜಿನಿಯರ್ ಎಚ್.ಬಿ.ಕೊಣ್ಣೂರ ಮಾತನಾಡಿ, ‘ಭಾರತ ರತ್ನ ಸರ್. ಎಂ ವಿಶ್ವೇಶ್ವರಯ್ಯನವರು ದೇಶ ಕಂಡ ಸರ್ವ ಶ್ರೇಷ್ಠ ಎಂಜನೀಯರ್ ಆಗಿದ್ದು, ಅವರ ಕಾರ್ಯಕ್ಷಮತೆ ನಮಗೆಲ್ಲರಿಗೂ ಮಾದರಿಯಾಗಿದೆ. ದೇಶದ ಪ್ರಗತಿಯಲ್ಲಿ ಅವರು ಕೈಗೊಂಡಿರುವ ಪ್ರತಿಯೊಂದು ಹೆಜ್ಜೆಗಳು ನಮಗೆ ದಾರಿ ದೀಪವಾಗಿವೆ. ಪ್ರತಿಯೊಬ್ಬ ಎಂಜಿನಿಯರ್‌ಗಳು ಅವರನ್ನು ಸ್ಮರಿಸುವ ದಿನ ಇದಾಗಿದೆ’ ಎಂದುಹೇಳಿದರು.

ತಹಶೀಲ್ದಾರ್ ಎಂ.ಬಸವರಾಜ ಮಾತನಾಡಿ, ‘ದೇಶಕ್ಕೆ ಅನ್ನನೀಡುವರೈತರಭಾಗವಾಗಿಇಲ್ಲಿಯಎಂಜಿನಿಯರ್‌ಗಳು ಕೂಡಾ ಕಾರ್ಯನಿರ್ವಹಿಸುತ್ತಿದ್ದಾರೆ ಎನ್ನುವದು ನಮ್ಮೆಲ್ಲರಿಗೂ ಒಳ್ಳೆಯ ವಿಷಯವಾಗಿದೆ’ ಎಂದು ಹೇಳಿದರು.

ಬಳಿಕ ವೀಶ್ವೇಶ್ವರಯ್ಯ ಅವರ ಕುರಿತು ಪ್ರಬಂಧ ಬರೆದ ಎಂಜಿನಿಯರ್‌ಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಎಇಇ ಹನುಮಂತಪ್ಪ, ಅನೀಲಕುಮಾರ, ಶಾಂತಪ್ಪ.ಬಿ.ಕೆ, ಬಾಲಚಂದ್ರ, ಶಿವಪ್ಪ ಸದಬ, ವೆಂಕಟೇಶ, ಚೈತ್ರಾ ಶಹಾಪುರಕರ್, ವಿಜಯಲಕ್ಷ್ಮೀ, ಮೇಘನಾ, ಮಹಾಂತೇಶ, ಕೆ.ಬಿ. ಪಾಟೀಲ, ಮಲ್ಲನಗೌಡ, ಮಹಾಲಿಂಗಪ್ಪ ಸೇರಿದಂತೆ ಇತರರು ಇದ್ದರು.

ಶಿಕ್ಷಣಕ್ಕೆ ಆದ್ಯತೆ ನೀಡಿದರೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಸಾಧ್ಯ: ನಂದಿತಾ

ಮಾನ್ವಿ: ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಜತೆಗೆ ಕಲ್ಯಾಣ ಕರ್ನಾಟಕ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸುವ ಮೂಲಕ ಈ ಭಾಗದ ಇತಿಹಾಸ ಮತ್ತು ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಬೇಕು ಎಂದು ನಂದಿತಾ ಹೇಳಿದರು.

ಪಟ್ಟಣದ ವಿಶ್ವಚೇತನ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಕಲ್ಯಾಣ ಕರ್ನಾಟಕ ಉತ್ಸವ ಹಾಗೂ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಓಂ ಮಂಡಳಿ ಶಿವಶಕ್ತಿ ಸೇವಾ ಸಂಸ್ಥಾನದ ಮಾನ್ವಿ ಶಾಖೆಯ ಸಂಚಾಲಕಿ ಅಕ್ಕಮ್ಮ ಅಕ್ಕನವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ, ದೇಶಪ್ರೇಮದ

ಜೊತೆಗೆ ಉತ್ತಮ ಶಿಕ್ಷಣ ಮತ್ತು ಸಂಸ್ಕಾರವನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಶಿಕ್ಷಕಿ ಶಾರದಾ ವಿಶ್ವಕರ್ಮ ಮಾತನಾಡಿ, ದೇವಶಿಲ್ಪಿ ವಿಶ್ವಕರ್ಮರ ಜೀವನ, ಸಾಧನೆ ಮತ್ತು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು.

ಶಿಕ್ಷಕಿ ಅಂಬುಜಾ ಅವರು ಕಲ್ಯಾಣ ಕರ್ನಾಟಕಕ್ಕೆ ದೊರೆತಿರುವ ವಿಶೇಷ ಸೌಲಭ್ಯಗಳ ಕುರಿತು ಮಾಹಿತಿ ನೀಡಿ, ಅವುಗಳನ್ನು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಖಾಸಗಿ ಶಾಲಾ ಶಿಕ್ಷಣ ಸಂಸ್ಥೆಗಳ ಒಕ್ಕೂಟದಿಂದ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಭಾಜನರಾದ ಶಿಕ್ಷಕಿ ಸುವರ್ಣ ಅವರನ್ನು ಸಂಸ್ಥೆಯ ಪರವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಶಿಕ್ಷಕಿ ಸುವರ್ಣ ಪ್ರಾರ್ಥನೆ ನೆರವೇರಿಸಿದರು.

ಶಿಕ್ಷಕಿ ಆಯಿಷಾ ಸ್ವಾಗತಿಸಿದರು.

ವೇದಿಕೆಯಲ್ಲಿ ಕಾರ್ಯದರ್ಶಿ ಗೀತಾ ಹಿರೇಮಠ, ಸಂಸ್ಥೆಯ ಅಧ್ಯಕ್ಷ ಎಂ.ಎಂ. ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಶಿಕ್ಷಕಿ ಬೂಶಿರಾ ವಂದಿಸಿದರು.

ಶಾಸಕ ಶರಣಬಸಪ್ಪ ದರ್ಶನಾಪುರ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ

ಶಹಾಪುರ: ‘ನಿಯಮನುಸಾರ ಪಡೆದುಕೊಂಡ ಕಾಮಗಾರಿಯನ್ನು ನಿಗದಿಪಡಿಸಿದ ಅವಧಿಯಲಿಯೇ ಪೂರ್ಣಗೊಳಿಸಿದರೆ ಇನ್ನು ಕೆಲಸ ನಿರ್ವಹಿಸಲು ಅನುಕೂಲವಾಗುತ್ತದೆ. ಇಲ್ಲದ ನೆಪ ಹೇಳಿ ಕಾಲಹರಣ ಮಾಡಬಾರದು. ಕ್ಷೇತ್ರದ ಪ್ರತಿಯೊಂದು ಹಳ್ಳಿಯಲ್ಲಿ ಕಾಮಗಾರಿ ನಡೆದಿವೆ’ ಎಂದು ಶಾಸಕ ಶರಣಬಸಪ್ಪ ದರ್ಶನಾಪುರ ತಿಳಿಸಿದರು.

ತಾಲ್ಲೂಕಿನ ಗಂಗನಾಳ ಗ್ರಾಮದಲ್ಲಿ ಕೆಕೆ ಆರ್ ಡಿಬಿ ಅನುದಾನದಲ್ಲಿ ?80ಲಕ್ಷ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಶಾಲಾ ಕೋಣೆಗಳನ್ನು ಪರಿಶೀಲಿಸಿ ಅವರು ಮಾತನಾಡಿದರು.ಗ್ರಾಮಸ್ಥರ ಜತೆ ಮಾತನಾಡಿ, ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದರು. ‘ಗ್ರಾಮಕ್ಕೆ ಬೇಕಾಗಿರುವ ಕೆಲಸದ ಬಗ್ಗೆ ಮಾಹಿತಿ ನೀಡಿ.

ನಾನೇ ಖುದ್ದಾಗಿ ಪರಿಶೀಲಿಸಿ ಕೆಲಸ ನಿರ್ವಹಿಸಲಾಗುವುದು. ಜನಪರ ಕೆಲಸಗಳಿಗೆ ಹಿಂಜ–ರಿಕೆ ಬೇಡ’ ಎಂದರು.

ನಂತರ ಶಾಸಕರು ತಾಲ್ಲೂಕಿನ ನಾನಗಟಗಿ ಗ್ರಾಮದ ವೀರಭದ್ರೇಶ್ವರ ಮಠದಿಂದ ಮೇಘನಾಯಕ ತಾಂಡಾದವರೆಗೆ 2025–26 ಸಾಲಿನ ಲೋಕೋಪಯೋಗಿ ವಿಶೇಷ ಅನುದಾನದಲ್ಲಿ 1ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ರಸ್ತೆ ಕಾಮಗಾರಿ ಪರಿಶೀಲಿಸಿದರು.

ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಮಹಾಂತ ಚಂದಾಪುರ, ಗ್ರಾಮದ ಮುಖಂಡರು ಭಾಗವಹಿಸಿದ್ದರು.

ಗೃಹಲಕ್ಷ್ಮೀ ಯೋಜನೆಯಲ್ಲಿ ಹಣ ಸೋರಿಕೆ ತಡೆಗಟ್ಟಲು ಕ್ರಮ



ಗದಗ:‘ಗೃಹಲಕ್ಷ್ಮೀ ಯೋಜನೆಯಉದ್ದೇಶಕ್ಕೆ ಧಕ್ಕೆಯಾಗದಂತೆ ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ಸೌಲಭ್ಯ ತಲುಪಿಸುವುದು ಹಾಗೂ ಸರ್ಕಾರದ ಹಣ ಸೋರಿಕೆ–ಯಾಗದಂತೆ ತಡೆಯುವುದು ಅವಶ್ಯ’ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಿದ್ದ ಗೃಹಲಕ್ಷ್ಮೀ ಯೋಜನೆಯ ಮರುಪರಿಶೀಲನಾ ಅರ್ಜಿಗಳ ಕುರಿತ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಯೋಜನೆ ಜಾರಿಯಾಗಿ ಮೂರು ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಫಲಾನುಭವಿಗಳ ವಿವರಗಳನ್ನು ಮರುಪರಿಶೀಲಿಸುವ ಅಗತ್ಯವಿದೆ. ಫಲಾನುಭವಿಗಳು ಮೃತಪಟ್ಟಿದ್ದರೂ,ಅವರ ಕುಟುಂಬದವರು ಹಣ ಪಡೆಯುತ್ತಿರುವ ಪ್ರಕರಣಗಳು ಗಮನಕ್ಕೆ ಬಂದಿವೆ. ಹಾಗಾಗಿ, ಫಲಾನುಭವಿಗಳ ನೈಜ ಸ್ಥಿತಿ ಪರಿಶೀಲಿಸಬೇಕು. ಅರ್ಹ ಫಲಾನುಭವಿಗಳಿಗೆ ಮಾತ್ರ ಯೋಜನೆಯ ಸೌಲಭ್ಯ ಮುಂದುವರಿಯುವಂತೆ ನೋಡಿಕೊಳ್ಳಬೇಕು’ ಎಂದು ಹೇಳಿದರು.

ಅನ್ಯ ರಾಜ್ಯದವರು ಹಾಗೂ ವಿವಿಧ ಕಾರಣಗಳಿಂದ ಯೋಜನೆಗೆ ಅನರ್ಹರಾಗಿರುವವರು ಸೌಲಭ್ಯ ಪಡೆಯುತ್ತಿರುವ ಪ್ರಕರಣಗಳನ್ನು ಪತ್ತೆ ಮಾಡಬೇಕು. ಇದಕ್ಕಾಗಿ, ಫಲಾನುಭವಿಗಳ ಮನೆಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬೇಕು. ಅಗತ್ಯ ದಾಖಲೆಗಳನ್ನು ಪರಿಶೀಲಿಸಿ, ನೈಜ ಸ್ಥಿತಿ ಖಚಿತಪಡಿಸಿಕೊಳ್ಳಬೇಕು. ಅರ್ಹ ಫಲಾನುಭವಿಗಳಿಗೆ ತೊಂದರೆ ಆಗದಂತೆ ಎಚ್ಚರ ವಹಿಸಬೇಕು’ ಎಂದು ನಿರ್ದೇಶನ ನೀಡಿದರು.

ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು ಫಲಾನುಭವಿಗಳಿಗೆ ನೀಡುತ್ತಿರುವ 2,000 ನೆರವನ್ನು ಮಹಿಳೆಯರು ಸ್ವಾವಲಂಬನೆ, ಮಕ್ಕಳ ವಿದ್ಯಾಭ್ಯಾಸ, ಕೃಷಿ ಚಟುವಟಿಕೆ, ಹೈನುಗಾರಿಕೆ, ವೈದ್ಯಕೀಯ ವೆಚ್ಚ ಸೇರಿದಂತೆ ವಿವಿಧ ಅಗತ್ಯಗಳಿಗೆ ಸದ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಗದಗ ಜಿಲ್ಲೆಯಲ್ಲಿ 2.74ಲಕ್ಷಫಲಾನುಭವಿಗಳಿಗೆಯೋಜನೆಯ ಸೌಲಭ್ಯ ತಲುಪಿದೆ’ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್.ಮುಂಡರಗಿ,ಮಹಿಳಾಮತ್ತುಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಬಿ. ಅಳಗವಾಡಿ, ತಾಲ್ಲೂಕು ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ದೇವಪ್ಪ ಮುರನಾಳ, ನಾಗರಾಜ ಮಡಿವಾಳರ, ನೇತ್ರಾ ಹರ್ತಿ ಇದ್ದರು.

ಅಂಗವಿಕಲರಿಗೆ ಆತ್ಮಸ್ಥೈರ್ಯದಿಂದ ಮುನ್ನಡೆಯಲು ಕರೆ ನೀಡಿದ ಬಸವರಾಜ ಬೊಮ್ಮಾಯಿ



ಗದಗ: ‘ಸಮಾಜದ ಪರಿಪೂರ್ಣತೆಗೆ ಅಂಗವಿಕಲರ ಕೊಡುಗೆ ಅತ್ಯಮೂಲ್ಯವಾಗಿದೆ. ಕಷ್ಟದ ಪರಿಸ್ಥಿತಿ ಮೆಟ್ಟಿನಿಂತು, ಆತ್ಮವಿಶ್ವಾಸದಿಂದ ಬದುಕು ರೂಪಿಸಿಕೊಳ್ಳಬೇಕು’ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ನಗರದ ಎ.ಪಿ.ಎಂ.ಸಿ ಆವರಣದಲ್ಲಿನ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಸಾಮಾಜಿಕ ನ್ಯಾಯ ಹಾಗೂ ಸಬಲೀಕರಣ ಇಲಾಖೆಯಿಂದ ಗುರುವಾರ ಆಯೋಜಿಸಿದ್ದ ‘ಸಾಮಾಜಿಕ ಅಧಿಕಾರಿತ ಶಿಬಿರ’ದಲ್ಲಿ ಅಂಗವಿಕಲರಿಗೆ ಸಾಧನ?ಸಲಕರಣೆ ವಿತರಿಸಿ ಮಾತನಾಡಿದರು.

ಅಂಗವಿಕಲರು ಹಲವು ತೊಂದರೆ ಎದುರಿಸುತ್ತಿದ್ದಾರೆ. ಕೊರತೆ ಮೀರಿಸಿದ ಪ್ರತಿಭೆ ಅವರದ್ದಾಗಿರುತ್ತದೆ. ತಾವು ಯಾರಿಗೂ ಕಡಿಮೆ ಇಲ್ಲವೆಂದು ಭಾವಿಸಬೇಕು. ಆತ್ಮಸ್ಥೈರ್ಯದೊಂದಿಗೆ ಮುನ್ನಡೆದರೆ ಬದುಕಿನಲ್ಲಿ ಯಶಸ್ಸು ಸಾಧಿಸಬಹುದು’ ಎಂದರು.


ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಅಂಗವಿಕಲರಿಗೆ ಅಗತ್ಯ ನೆರವು ನೀಡುವುದು ಮತ್ತು ಸ್ವಾವಲಂಬಿಗಳಾಗಿ, ಸ್ವಾಭಿಮಾನದಿಂದ ಬದುಕುವಂತೆ ಮಾಡುವುದು ಕೇಂದ್ರ ಸರ್ಕಾರದ ಮುಖ್ಯ ಉದ್ದೇಶವಾಗಿದೆ. ಮುಂದಿನ ಮೂರು ವರ್ಷಗಳಲ್ಲಿ ಎಲ್ಲ ಅಂಗವಿಕಲರಿಗೆ ಸಂಪೂರ್ಣ ಸಹಾಯವನ್ನು ಒದಗಿಸುವ ಸಂಕಲ್ಪ ಮಾಡಲಾಗಿದೆ. ಕೇಂದ್ರ ಸರ್ಕಾರದ ಯೋಜನೆಯನ್ನು ಇನ್ನಷ್ಟು ದೊಡ್ಡ ಪ್ರಮಾಣದಲ್ಲಿ, ಎಲ್ಲರಿಗೂ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು’ ಎಂದು ಭರವಸೆ ನೀಡಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿತ್ವ,

ನಾಯಕತ್ವ ಮತ್ತು ಜನಪರ ಯೋಜನೆಗಳಿಂದಾಗಿ ಭಾರತವು ಜಾಗತಿಕ ಮಟ್ಟದಲ್ಲಿ ಅಭೂತಪೂರ್ವ ಯಶಸ್ಸು ಸಾಧಿಸುತ್ತಿದೆ. ಅನ್ನ, ನೀರು, ಆಹಾರ, ಆಶ್ರಯ ಮತ್ತು ಉದ್ಯೋಗ ಕಲ್ಪಿಸಲಾಗುತ್ತಿದೆ. ಮುಂದಿನ ಎರಡು ವರ್ಷಗಳಲ್ಲಿ ಭಾರತವು ವಿಶ್ವದ ಮೂರನೇ ಅತಿ ದೊಡ್ಡ ಆರ್ಥಿಕ ಶಕ್ತಿಯಾಗಲಿದೆ’ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ ಸಂಕನೂರ, ಗದಗ?ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಜಿ, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ ಎಸ್.ಎನ್., ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಭಿವೃದ್ಧಿ ಉಪ ನಿರ್ದೇಶಕಿ ರಾಧಾ ಜಿ. ಮಣ್ಣೂರ, ಅಲಿಮ್ಕೋ ಕಂಪನಿಯ ವ್ಯವಸ್ಥಾಪಕ ಲೈಸನ್ ಸರ್ಕಾರ ಇದ್ದರು.

ಆತ್ಮಶುದ್ಧಿಗೆ ಒತ್ತು ನೀಡುವ ಜೈನ ಧರ್ಮದ ದಶಲಕ್ಷಣ ಪರ್ವ



ಮುಳಗುಂದ: ವೈರಾಗ್ಯ, ಶಾಂತಿ, ತ್ಯಾಗ ಹಾಗೂ ಅಹಿಂಸೆಯಂತಹ ಮೌಲ್ಯಗಳನ್ನು ಜಗತ್ತಿಗೆ ನೀಡಿದ ಜೈನ ಧರ್ಮದ ಕೊಡುಗೆ ಅಪಾರವಾಗಿದೆ. ಆತ್ಮಶುದ್ಧಿಗೆ ಒತ್ತು ನೀಡುವ ಜೈನ ಧರ್ಮದಲ್ಲಿ ದಶಲಕ್ಷಣ ಪರ್ವವು ವಿಶೇಷ ಮಹತ್ವ ಹೊಂದಿದೆ ಎಂದು ಆರ್. ಎನ್.ಡಿ. ಕಾಲೇಜಿನ ಪ್ರಾಚಾರ್ಯ ಆರ್. ಎಂ. ಕಲ್ಲನಗೌಡ್ರ ಹೇಳಿದರು.

ಪಟ್ಟಣದ ದೇಶಪಾಂಡೆಯವರ ವಾಡೆಯಲ್ಲಿ ಗದಗ ಜಿಲ್ಲಾ ದಿಗಂಬರ ಜೈನ ಸಂಘದ ವತಿಯಿಂದ ಗುರುವಾರ ಆಯೋಜಿಸಿದ್ದ ದಶಲಕ್ಷಣ ಪರ್ವ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಕ್ಷಮಾ, ಮಾರ್ದವ, ಆರ್ಜವ, ಶೌಚ, ಸತ್ಯ, ಸಂಯಮ, ತಪ, ತ್ಯಾಗ, ಆಕಿಂಚನ್ಯ ಹಾಗೂ ಬ್ರಹ್ಮಚರ್ಯ ಎಂಬ ಹತ್ತು ಧರ್ಮಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಆತ್ಮೋನ್ನತಿ ಸಾಧಿಸುವುದು ದಶಲಕ್ಷಣ ಪರ್ವದ ಪ್ರಮುಖ ಆಶಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಎನ್.ಆರ್. ದೇಶಪಾಂಡೆ ಮಾತನಾಡಿ, ದಶಲಕ್ಷಣ ಪರ್ವದ ಆಚರಣೆಯ ಮಹತ್ವವನ್ನು ಎಲ್ಲರಿಗೂ ತಿಳಿಸುವ ಉದ್ದೇಶದಿಂದ ವಿವಿಧ ಧರ್ಮಗಳ ಜನರನ್ನು ಒಳಗೊಂಡು ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ಹೇಳಿದರು.

ಎಂ.ಟಿ. ಕಬ್ಬಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಂ.ಡಿ. ಬಟ್ಟೂರ, ವೈದ್ಯ ಡಾ. ಎಸ್.ಸಿ. ಚವಡಿ, ಭೋಜರಾಜ ನಾವಳ್ಳಿ, ಪಿ.ಜಿ. ನಾವಳ್ಳಿ, ಬಿ.ವಿ. ಸುಂಕಾಪೂರ, ಪ್ರಕಾಶ ಮುತ್ತತ್ತಿ, ಸಂಕಪ್ಪ ನಾವಳ್ಳಿ, ಆನಂದ ಬಸ್ತಿ, ಯಶವಂತ ಸಿದ್ದಣ್ಣವರ, ಆನಂದ ಜೈನ, ವೀರೇಂದ್ರ ಹೂಲಿ ಇದ್ದರು.

ಬ್ಯಾನರ್‌ನಲ್ಲಿ ಪ್ರಧಾನಿ ಮೋದಿ ಫೋಟೊ ಇಲ್ಲವೆಂದು ಸಂಸದ ಬೊಮ್ಮಾಯಿ ಗರಂ



ಗದಗ: ನಗರದ ಎಪಿಎಂಸಿ ಆವರಣದ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಸಾಮಾಜಿಕ ಅಧಿಕಾರ ಶಿಬಿರ ಕಾರ್ಯಕ್ರಮದ ಬ್ಯಾನರ್‌ನಲ್ಲಿ ಪ್ರಧಾನಿ ಮೋದಿ ಫೋಟೊ ಮುದ್ರಿಸಿಲ್ಲವೆಂದು ಸಂಸದ ಬಸವರಾಜ ಬೊಮ್ಮಾಯಿ ಅಸಮಾಧಾನ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರದ ಕಾರ್ಯಕ್ರಮವಾಗಿದ್ದರೂ ಪ್ರಧಾನಿ ಮೋದಿ ಅವರ ಫೋಟೊ ಹಾಕಿಲ್ಲ. ಈ ಮೂಲಕ ಅಧಿಕಾರಿಗಳು ಶಿಷ್ಟಾಚಾರ ಉಲ್ಲಂಘನೆ ಮಾಡಿದ್ದಾರೆ. ಕಾರ್ಯಕ್ರಮದ ಬ್ಯಾನರ್‌ನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಫೋಟೊ ಇರುವುದಕ್ಕೆ ಆಕ್ಷೇಪವಿಲ್ಲ. ಆದರೆ, ಪ್ರಧಾನಿ ಮೋದಿ ಫೋಟೊ ಕೈಬಿಟ್ಟಿದ್ದು ಸರಿಯಲ್ಲ’ ಎಂದು ಗರಂ ಆದರು.

ರಾಜ್ಯ ಸರ್ಕಾರ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಫೋಟೊ ಇಲ್ಲದಿದ್ದರೆ ಸುಮ್ಮನಿರುತ್ತಿದ್ದಿರೇ’ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರನ್ನು ಪ್ರಶ್ನಿಸಿದರು.

ಕಾರ್ಯಕ್ರಮದ ಬ್ಯಾನರ್‌ನಲ್ಲಿ ಡಿ.ಕೆ. ಶಿವಕುಮಾರ್ ಅವರ ಫೋಟೊ ಪಕ್ಕದಲ್ಲಿ ಪ್ರಧಾನಿ ಮೋದಿ ಅವರು ಅಂಗವಿಕಲರೊಂದಿಗೆ ಸಮಾಲೋಚನೆ ನಡೆಸಿದ ಮೂರು ಫೋಟೊಗಳನ್ನು ಮುದ್ರಿಸಲಾಗಿತ್ತು.

ನರಗುಂದದಲ್ಲಿ ಅಧಿಕಾರಿಗಳ ಸೋಗಿನಲ್ಲಿ ವಂಚನೆ ಪ್ರಕರಣ: ಇಬ್ಬರ ಬಂಧನ

ನರಗುಂದ: ಪೊಲೀಸ್ ಹಾಗೂ ಆಹಾರ ಇಲಾಖೆ ಅಧಿಕಾರಿಗಳ ಸೋಗಿನಲ್ಲಿ ವ್ಯಕ್ತಿಯನ್ನು ಬೆದರಿಸಿ, ಬಲವಂತವಾಗಿ 80,000 ಪಡೆದಿದ್ದ ಪ್ರಕರಣದಲ್ಲಿ ಪಟ್ಟಣದ ನಿವಾಸಿಗಳಾದ ದುರಗಪ್ಪ ಜಮಖಂಡಿ, ರಫೀಕಲೋದಿ ಎಂಬುವರನ್ನು ಸ್ಥಳೀಯ ಪೊಲೀಸರು ಬಂಧಿಸಿದ್ದಾರೆ. ಮತ್ತೊಬ್ಬ ಆರೋಪಿ ವಾಸನ ಗ್ರಾಮದ ಕಿರಣ ಮೂಲಿಮನಿ ತಲೆಮರೆಸಿಕೊಂಡಿದ್ದಾನೆ ಎಂದು ತಿಳಿಸಿದ್ದಾರೆ.

ನಡೆದಿದ್ದೇನು?: ಜುಲೈ 8ರಂದು ಹದಲಿ ಗ್ರಾಮದ ರಮೇಶ ದಾಸರ ಎಂಬುವರು ಹದಲಿ ಗ್ರಾಸ್ ಬಳಿ ನಿಂತಿದ್ದಾಗ, ಅಕ್ರಮವಾಗಿ ಪಡಿತರ ಅಕ್ಕಿ ತುಂಬಲು ಹೊರಟಿದ್ದೀಯ ಎಂದು ಮೂವರು ಆರೋಪಿಗಳು ಹೆದರಿಸಿ, ಹಲ್ಲೆ ನಡೆಸಿದ್ದಾರೆ.

ಪ್ರಕರಣ ಮುಚ್ಚಿಹಾಕುವುದಾಗಿಹೇಳಿ 20 ಸಾವಿರ ನಗದು ಕಿತ್ತುಕೊಂಡು,

ರಮೇಶ ಅವರ ಮೊಬೈಲ್ ಫೋನ್ ಕಸಿದು ಅವರ ಫೋನ್ ಪೇ ಖಾತೆಯಿಂದ 30 ಸಾವಿರ, ಅವರ ಸ್ನೇಹಿತನ ಮೂಲಕ 30 ಸಾವಿರ ಫೋನ್‌ಪೇ ಮಾಡಿಸಿಕೊಂಡಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಪ್ರಕರಣ ಸಂಬಂಧ ಸೆ.15ರಂದು ನರಗುಂದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಡಿವೈಎಸ್‌ಪಿ ಪ್ರಭುಗೌಡ ಕಿರೇದಹಳ್ಳಿ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆಸಿದೆ.

Printed by Published by ASHWARYA PALLATE on behalf of ASHWARYA PALLATE, Printed at DHARIDEEPA PRINTERS & PUBLISHERS, NO. 74, 4TH MAIN, 7TH CROSS NEAR CHOWDESHWARI TEMPLE, KAVERINAGAR, MAHADEVAPURA, BENGALURU, KARNATAKA - 560048. and Published at BASAVESHWAR CIRCLE, 4TH CROSS, NEKAR NAGAR, HUBLI, OLD HUBLI, DHARWAD, KARNATAKA - 580024. Editor ASHWARYA PALLATE